ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೬೫**

**ಪಟ್ಟಿ – ೨೧**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಸೋಮವಾರ, ದಿನಾಂಕ : ೨೧ನೇ ಜುಲೈ, ೨೦೧೪**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

3386-1

## ಗ್ರಾಮೀಣ ಪ್ರದೇಶದಲ್ಲಿ ಬಸ್ ಸೌಕರ್ಯ ಇಲ್ಲದಿರುವುದು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೦೪ (೧೭೦೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮದ ಜನತೆ ಹಾಗೂ ಶಾಲಾ ವಿದ್ಯಾರ್ಥಿಗಳಿಗೆ ಗ್ರಾಮೀಣ ರಸ್ತೆ ಸಾರಿಗೆ ಹಾಗೂ ಬಸ್ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಭಾಗದಲ್ಲಿ ಬಸ್ ನಿಲ್ದಾಣ ನಿರ್ಮಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಡಿತರ ಚೀಟಿ ಹಂಚಿಕೆಯಲ್ಲಿ ಗೊಂದಲ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೦೫ (೧೬೩೮) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಪಡಿತರ ಚೀಟಿ ಹಂಚಿಕೆಯಲ್ಲಿ ಬಹಳಷ್ಟು ಗೊಂದಲಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಿ.ಪಿ.ಎಲ್. ಕಾರ್ಡ್ ಮತ್ತು ಎ.ಪಿ.ಎಲ್. ಕಾರ್ಡ್‌ದಾರರ ಹಂಚಿಕೆಯಲ್ಲಿ ಅದರಲ್ಲೂ ಅರ್ಹ ಬಡವರಿಗೆ ಬಿ.ಪಿ.ಎಲ್. ಕಾರ್ಡ್ ಹಂಚಿಕೆಯಲ್ಲಿ ಅನ್ಯಾಯವಾಗಿರುವುದು ನಿಜವೇ ;

(ಇ) ಅನರ್ಹರಿಗೆ ಅಂದರೆ ಶ್ರೀಮಂತರಿಗೆ ಬಿ.ಪಿ.ಎಲ್. ಕಾರ್ಡ್ ದೊರೆತಿರುವುದನ್ನು ಸರ್ಕಾರ ಗಮನಿಸಿದೆಯೇ ; ಇದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ನರ್ಸ್, ಪೈಲೆಟ್ ಮತ್ತು ಗಗನಸಖಿಯರ ತರಬೇತಿ ಹೊಂದಿದ ವಿದ್ಯಾರ್ಥಿಗಳು

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೦೬ (೧೬೩೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ಪದವೀಧರರಿಗಾಗಿ ನಡೆಸುತ್ತಿರುವ ನರ್ಸ್, ಪೈಲೆಟ್ ಮತ್ತು ಗಗನಸಖಿಯರ ತರಬೇತಿಯಲ್ಲಿ ಇದುವರೆಗೆ ತರಬೇತಿ ಹೊಂದಿದ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರು ಎಷ್ಟು ;

(ಆ) ಆ ಪೈಕಿ ತೇರ್ಗಡೆಯಾದ ವಿದ್ಯಾರ್ಥಿ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ; ಇವರುಗಳಲ್ಲಿ ಎಷ್ಟು ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಉದ್ಯೋಗ ದೊರೆತಿದೆ ; ಇದರಿಂದ ಅನುಕೂಲ ಪಡೆದ ವಿದ್ಯಾರ್ಥಿಗಳೆಷ್ಟು (ವಿದ್ಯಾರ್ಥಿಗಳ ಮಾಹಿತಿ ನೀಡುವುದು) ?

## ಕ್ಯಾನ್ಸರ್ ರೋಗದಿಂದ ಬಳಲುತ್ತಿರುವ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೦೭ (೧೬೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳ ಜನರು ಅತಿ ಹೆಚ್ಚಾಗಿ ಕ್ಯಾನ್ಸರ್ ರೋಗದಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಾಯಿಲೆಗಾಗಿ ಜನರಿಗೆ ಸೂಕ್ತವಾದ ಚಿಕಿತ್ಸೆ ಇಲ್ಲದೆ ಮತ್ತು ನುರಿತ ವೈದ್ಯರ ಕೊರತೆಯಿಂದ ನೆರೆ ರಾಜ್ಯಕ್ಕೆ ಬಡರೋಗಿಗಳು ತೆರಳುತ್ತಿರುವುದು ನಿಜವೇ ;

(ಇ) ಆ ಭಾಗದ ಜನರ ಈ ಮಾರಣಾಂತಿಕ ಕಾಯಿಲೆಯು ನಿವಾರಣೆಗಾಗಿ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಆಹಾರ ಭದ್ರತೆ ಯೋಜನೆ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೦೮ (೧೬೪೩) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರದಿಂದ ಜಾರಿಯಾಗಿರುವ ಆಹಾರ ಭದ್ರತೆ ಯೋಜನೆ ರಾಜ್ಯದಲ್ಲಿ ಜಾರಿಗೆ ಬಂದಿದೆಯೇ ;

(ಆ) ಆಹಾರ ಭದ್ರತೆ ಯೋಜನೆ ವ್ಯಾಪ್ತಿಗೆ ಬರುವ ಪಡಿತರ ಚೀಟಿದಾರರು ಯಾರು ; ಈ ಪಡಿತರ ಚೀಟಿದಾರರ ಒಟ್ಟು ಸಂಖ್ಯೆ ಎಷ್ಟು ; ಇದರಲ್ಲಿ ಬೆಳಗಾಂ ಜಿಲ್ಲೆಯಲ್ಲಿ ಬರುವ ಪಡಿತರ ಚೀಟಿದಾರರ ಸಂಖ್ಯೆ ಎಷ್ಟು ;

(ಇ) ಈ ಆಹಾರ ಭದ್ರತೆ ಯೋಜನೆ ಜಾರಿಗೆ ಸರ್ಕಾರ ಯಾವ ರೀತಿ ಸಿದ್ಧತೆ ಮಾಡಿಕೊಂಡಿದೆ (ಪೂರ್ಣ ಮಾಹಿತಿ ನೀಡುವುದು) ?

## ಕಾಕತಿ ಪ್ರಾಥಮಿಕ ಆರೋಗ್ಯ ಕೇಂದ್ರದ ಪ್ರಾರಂಭ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೭೯ (೧೬೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೭ರಲ್ಲಿ ರದ್ದುಪಡಿಸಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬೆಳಗಾವಿ ಜಿಲ್ಲೆಯ ಕಾಕತಿ ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದೆಯೇ ;

(ಆ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ರದ್ದುಪಡಿಸಲು ಕಾರಣವೇನು ;

(ಇ) ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರವು ವಿಧಿಸಿದ್ದ ಷರತ್ತುಗಳು ಯಾವುವು ; ಅವುಗಳಲ್ಲಿ ಎಷ್ಟು ಷರತ್ತುಗಳನ್ನು ಗ್ರಾಮಸ್ಥರು ಪೂರೈಸಿರುತ್ತಾರೆ ; ಹಾಗೂ ಎಷ್ಟು ಷರತ್ತುಗಳನ್ನು ಪೂರೈಸಿರುವುದಿಲ್ಲ ;

(ಈ) ಪೂರೈಸದೇ ಇರುವ ಷರತ್ತುಗಳನ್ನು ಸರ್ಕಾರವೇ ಪೂರೈಸಿಕೊಂಡು ಮಂಜೂರು ಮಾಡಲಾದ ಬೆಳಗಾವಿ ಜಿಲ್ಲೆ ಹಾಗೂ ತಾಲ್ಲೂಕಿನ ಕಾಕತಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಉ) ಕಾಕತಿ ಸ್ಥಳವು ವೀರರಾಣಿ ಕಿತ್ತೂರು ಚೆನ್ನಮ್ಮನವರು ಜನಿಸಿದ ಐತಿಹಾಸಿಕ ಸ್ಥಳವಾಗಿದ್ದು ಇಂತಹ ಪಾವಿತ್ರ್ಯ ಸ್ಥಳದ ಗ್ರಾಮಸ್ಥರಿಗೆ ಕನಿಷ್ಠ ಆರೋಗ್ಯ ಸೌಲಭ್ಯಕ್ಕಾಗಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಬೇಕೆಂಬ ಬಯಕೆ ಸರ್ಕಾರಕ್ಕೆ ಇಲ್ಲವೇ ?

## ಸಮಾಜ ಕಲ್ಯಾಣ ಯೋಜನೆಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೧೦ (೧೬೪೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ಅನುದಾನದಲ್ಲಿ ಅನುಷ್ಠಾನ ಮಾಡಿದ ಯೋಜನೆಗಳೆಷ್ಟು ; ಅವುಗಳಿಗೆ ವೆಚ್ಚ ಮಾಡಿದ ಹಣವೆಷ್ಟು ;

(ಆ) ಪ್ರಸಕ್ತ ಸಾಲಿನಲ್ಲಿ ಇಲಾಖೆಯ ವತಿಯಿಂದ ಹಮ್ಮಿಕೊಂಡಿರುವ ಯೋಜನೆಗಳಾವುವು ; ಅವುಗಳ ರೂಪುರೇಷೆಗಳೇನು ?

## ಅಂಕಪಟ್ಟಿ ಹಗರಣದಲ್ಲಿ ಭಾಗಿಯಾದ ಅಧಿಕಾರಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೧೧ (೧೬೪೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಂಕಪಟ್ಟಿ ಹಗರಣದಲ್ಲಿ ಸಿಕ್ಕಿಬಿದ್ದ ವೈದ್ಯ ವಿದ್ಯಾರ್ಥಿಗಳ ಫಲಿತಾಂಶ ರದ್ದುಪಡಿಸಿ ಮರು ಪರೀಕ್ಷೆ ಮಾಡಿರುವ ಪ್ರಕರಣವು ಬೆಳಕಿಗೆ ಬಂದಿದೆಯೇ ;

(ಆ) ಅಂತಹ ವಿಶ್ವವಿದ್ಯಾಲಯ ಯಾವುದು ; ಆ ವೈದ್ಯ ವಿದ್ಯಾರ್ಥಿಗಳು ಯಾರು, ಯಾವ ಪ್ರಕರಣದಲ್ಲಿ ಸಿಕ್ಕಿಬಿದ್ದಿದ್ದರು ; ಇದಕ್ಕೂ ಪರೀಕ್ಷೆ ಫಲಿತಾಂಶ ತಡೆಗೆ ಏನು ಸಂಬಂಧ ; ಎಷ್ಟು ಜನ ವಿದ್ಯಾರ್ಥಿಗಳು ಇದರಲ್ಲಿ ಭಾಗಿಯಾಗಿದ್ದರು ;

(ಇ) ಸದರಿ ಫಲಿತಾಂಶವನ್ನು ಎಲ್ಲಾ ವಿದ್ಯಾರ್ಥಿಗಳಿಗೂ ಸಾಮೂಹಿಕವಾಗಿ ಅನ್ವಯವಾಗುವಂತೆ ರದ್ದುಪಡಿಸಲಾಗಿತ್ತೆ ; ಅಥವಾ ಕೇವಲ ಹಗರಣದಲ್ಲಿ ಪಾಲ್ಗೊಂಡವರಿಗೆ ಮಾತ್ರವೇ ಅನ್ವಯಗೊಳಿಸಲಾಗಿತ್ತೆ; ಹೇಗೆ (ವಿವರ ಒದಗಿಸುವುದು) ;

(ಈ) ಇದರ ತನಿಖೆಯ ವಿಚಾರಣೆಯು ಯಾವ ಹಂತದಲ್ಲಿದೆ ಹಾಗೂ ಸದರಿ ಪ್ರಕರಣದಲ್ಲಿ ಭಾಗಿಯಾದ ಏಜೆನ್ಸಿಯವರು ಹಾಗೂ ವಿಶ್ವವಿದ್ಯಾಲಯ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಆ ಏಜೆನ್ಸಿಯವರು ಯಾರು ; ಪಾಲ್ಗೊಂಡ ವಿಶ್ವವಿದ್ಯಾಲಯ ಅಧಿಕಾರಿಗಳು ಯ್ಯಾರ್ಯಾರು (ಪ್ರತ್ಯೇಕ ವಿಶ್ವವಿದ್ಯಾಲಯ. ಹೆಸರು, ಅಧಿಕಾರಿಯ ಪದನಾಮದೊಂದಿಗೆ ವಿವರವಾದ ಮಾಹಿತಿ ನೀಡುವುದು) ?

## ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮಹಿಳೆಯರ ಕಲ್ಯಾಣ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೧೨ (೧೬೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ನಕಲಿ ವೈದ್ಯರಿಂದ ತೊಂದರೆಗೊಳಗಾಗಿರುವ ಪ್ರಕರಣಗಳೆಷ್ಟು ;

(ಆ) ಈವರೆಗೂ ಪತ್ತೆ ಹಚ್ಚಿರುವ ನಕಲಿ ವೈದ್ಯರೆಷ್ಟು ; ಇವರ ಮೇಲೆ ಕೈಗೊಂಡಿರುವ ಕಾನೂನು ಕ್ರಮಗಳೇನು ;

(ಇ) ರಾಜ್ಯದಲ್ಲಿ ನಕಲಿ ವೈದ್ಯರ ಸಂಖ್ಯೆ ಹೆಚ್ಚಲು ಕಾರಣವೇನು ; ಗ್ರಾಮೀಣ ಜನರನ್ನು ಇವರಿಂದ ರಕ್ಷಿಸಲು ಕೈಗೊಂಡಿರುವ ಕ್ರಮಗಳೇನು ;

(ಈ) ನಕಲಿ ವೈದ್ಯರ ತಡೆಗೆ ರಚಿಸಿರುವ ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿಗೆ ನೀಡಿರುವ ಅಧಿಕಾರವೇನು ;

(ಉ) ಈ ನಿಟ್ಟಿನಲ್ಲಿ ಹಾಲಿ ಇರುವ ಕಾನೂನಿನಲ್ಲಿ ಅನುಸರಿಸಬೇಕಾದ ದೀರ್ಘಕಾಲಿಕ ಪ್ರಕ್ರಿಯೆಗಳು ಮತ್ತು ಶಿಕ್ಷೆಯ ಪ್ರಮಾಣ ಕಡಿಮೆಯಿಂದಾಗಿ ನಕಲಿ ವೈದ್ಯರು ನುಣುಚಿಕೊಳ್ಳಲು ಅನುಕೂಲ ಮಾಡಿಕೊಟ್ಟಿದ್ದು, ಇದಕ್ಕೆ ಸೂಕ್ತ ತಿದ್ದುಪಡಿ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಊ) ಕರ್ನಾಟಕ ವೈದ್ಯ ಪರಿಷತ್‌ಗೆ ಹೆಚ್ಚಿನ ಅಧಿಕಾರ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಂಗವಿಕಲರ ಮಾಸಿಕ ವೇತನ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೩೧೩ (೧೬೪೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಶೇಕಡ ೭೫ಕ್ಕಿಂತ ಹೆಚ್ಚು ಅಂಗವಿಕಲತೆ ಅನುಭವಿಸುತ್ತಿರುವವರ ಸಂಖ್ಯೆ ಎಷ್ಟು ;

(ಆ) ಶೇಕಡ ೭೫ಕ್ಕಿಂತ ಹೆಚ್ಚು ಅಂಗವಿಕಲತೆ ಇರುವ ವ್ಯಕ್ತಿಗಳಿಗೆ ಮಾಸಿಕ ಸಹಾಯಧನ ನೀಡಲು ಇರುವ ಮಾನದಂಡಗಳೇನು ;

(ಇ) ಶೇಕಡ ೭೫ಕ್ಕಿಂತ ಹೆಚ್ಚು ಅಂಗವಿಕಲತೆ ಇರುವವರ ಸಂಖ್ಯೆ ಕಡಿಮೆ ಇರುವುದರಿಂದ ಹಾಗೂ ಅವರು ಅತ್ಯಂತ ದುರ್ಲಬವಾದ ಸಾಮಾಜಿಕ ಸಮಸ್ಯೆಗಳನ್ನು ಎದುರಿಸುತ್ತಿರುವುದರಿಂದ ಮಾಸಿಕ ಸಹಾಯಧನ ನೀಡುವಲ್ಲಿನ ಆರ್ಥಿಕ ಮಾನದಂಡವನ್ನು ಸಡಿಲ ಮಾಡುವುದರ ಕುರಿತಾಗಿ ಸರ್ಕಾರದ ನಿಲುವೇನು ?

## ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್ ಯೋಜನೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೧೪ (೧೬೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್ ಯೋಜನೆಯನ್ನು ಜಾರಿ ಮಾಡುವಲ್ಲಿ ಪ್ರಾದೇಶಿಕ ಅಸಮಾನತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಉತ್ತರ ಕರ್ನಾಟಕದಲ್ಲಿ ಕಡಿಮೆ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಹೆಚ್ಚಿಸಿ ಪ್ರಾದೇಶಿಕ ಅಸಮತೋಲನವನ್ನು ಸರಿದೂಗಿಸಲು ಅಗತ್ಯಕ್ರಮಗಳನ್ನು ಕೈಗೊಳ್ಳಲಾಗುವುದೇ ;

(ಇ) ಜನಸಂಖ್ಯೆ ಆಧಾರದ ಮೇರೆಗೆ, ಸೌಲಭ್ಯ ಅಗತ್ಯವಿರುವ ಆರೋಗ್ಯ ಕೇಂದ್ರಗಳನ್ನು ಉನ್ನತ್ತೀಕರಿಸಿ, ಅಗತ್ಯ ಸಿಬ್ಬಂದಿ ನಿಯೋಜಿಸಿ, ಸ್ಥಳೀಯರ ಬೇಡಿಕೆಗಳನ್ನು ಈಡೇರಿಸಲು ಎಲ್ಲಾ ತಾರತಮ್ಯಗಳನ್ನು ಸರಿಪಡಿಸಲಾಗುವುದೆ ?

## ತಾಂಡಾಗಳ ಸಮಗ್ರ ಅಭಿವೃದ್ಧಿ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೧೫ (೧೭೧೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಹುತೇಕ ತಾಂಡಾಗಳಲ್ಲಿನ ಜನರು ವರ್ಷದಲ್ಲಿ ಏಳೆಂಟು ತಿಂಗಳು ಕೂಲಿಗಾಗಿ ಬೇರೆ ರಾಜ್ಯಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

03386-2

(ಆ) ಹಾಗಿದ್ದಲ್ಲಿ, ತಾಂಡಾ ವಾಸಿಗಳು ವಲಸೆ ಹೋಗದಂತೆ ಉದ್ಯೋಗ ಕಲ್ಪಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿನ ತಾಂಡಾ ವಾಸಿಗಳಿಗಾಗಿ ಒಳ್ಳೆಯ ವಸತಿ, ಕುಡಿಯುವ ನೀರು, ಶೌಚಾಲಯ, ಚರಂಡಿ, ಶಿಕ್ಷಣ ನೈರ್ಮಲ್ಯ ಮುಂತಾದ ಸೌಲಭ್ಯಗಳನ್ನು ಒದಗಿಸಲು ಯಾವ ಯಾವ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತಿದೆ ;

(ಈ) ತಾಂಡಾಗಳನ್ನು ಸರ್ಕಾರವು ದತ್ತು ಪಡೆದು ಸಮಗ್ರ ಅಭಿವೃದ್ಧಿಗಾಗಿ ಮತ್ತು ಅವರ ವಿಶಿಷ್ಟ ಸಂಸ್ಕೃತಿಯ ರಕ್ಷಣೆಗಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದೇ ?

## ಮಡಿಕೇರಿ ಡಿಪೋದಲ್ಲಿರುವ ಹಳೆ ಬಸ್ಸುಗಳ ಬದಲಾವಣೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೧೬ (೧೬೫೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಮಡಿಕೇರಿ ಡಿಪೋದಿಂದ ಸಂಚರಿಸುತ್ತಿರುವ ಬಹುತೇಕ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳು ತುಂಬಾ ಹಳೆಯದಾಗಿದ್ದು ಸಂಚಾರಕ್ಕೆ ಯೋಗ್ಯವಾಗಿರುವುದಿಲ್ಲವೆಂದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಹಳೇ ಬಸ್ಸುಗಳನ್ನು ಹಿಂಪಡೆದುಕೊಂಡು ಹೊಸ ಬಸ್ಸುಗಳನ್ನು ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ವಾಯುವ್ಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಸ್ಥಿತಿ–ಗತಿ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೧೭ (೧೬೫೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಯುವ್ಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಲಾಭದಾಯಕವಾಗಿ ನಡೆದಿದೆಯೇ (ವಿವರಣೆ ನೀಡುವುದು) ;

(ಆ) ಇದರ ಕಾರ್ಯ ವ್ಯಾಪ್ತಿಯಲ್ಲಿ ಯಾವ ಯಾವ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರ ಸ್ಥಳಗಳಲ್ಲಿ ಹೊಸ ಬಸ್ ನಿಲ್ದಾಣಗಳು ನಿರ್ಮಾಣವಾಗುತ್ತಿವೆ ;

(ಇ) ಈ ವಿಭಾಗದ ಕಾರ್ಯವ್ಯಾಪ್ತಿಯಲ್ಲಿ ಲಾಭದಾಯಕವಾಗಿ ನಡೆಯುತ್ತಿರುವ ಡಿಪೋಗಳಾವುವು (ಪ್ರತಿ ಡಿಪೋವಾರು ವಿವರಣೆ ನೀಡುವುದು) ?

## ವಾಯುವ್ಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗದಲ್ಲಿ ಸಂಚರಿಸುವ ಸುಖಾಸೀನ ಬಸ್ಸುಗಳು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೧೮ (೧೬೫೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಯುವ್ಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಓಡಾಡುವ ಸುಖಾಸೀನ ಬಸ್ಸುಗಳು ಯಾವ ಯಾವ ಡಿಪೋಗಳಲ್ಲಿ ಎಷ್ಟೆಷ್ಟು ಇವೆ (ಜಿಲ್ಲಾವಾರು ವಿವರಣೆ ನೀಡುವುದು) ; ಅದರಲ್ಲಿ ವೋಲ್ವೋ

ಬಸ್ಸುಗಳು ಎಷ್ಟು ; ಯಾವ ಯಾವ ಮಾರ್ಗದಲ್ಲಿ ಸಂಚರಿಸುತ್ತಿವೆ ಮತ್ತು ಹವಾ ನಿಯಂತ್ರಿತ ಸ್ಲೀಪರ್ ಬಸ್ಸುಗಳು ಎಷ್ಟು ; ಅವುಗಳ ಮಾರ್ಗ ತಿಳಿಸುವುದು ;

(ಆ) ಬಾಗಲಕೋಟೆ ಜಿಲ್ಲೆಯ ಜಮಖಂಡಿಯಿಂದ ಹೊರಡುವ ಹವಾ ನಿಯಂತ್ರಣವಲ್ಲದ ಜಿಲ್ಲೆಯ ಏಕೈಕ ಸ್ಲೀಪರ್ ಬಸ್ಸು ಮಳೆಗೆ ಸೋರುತ್ತಿದ್ದು, ಬಹಳ ದಿನಗಳಿಂದ ಇದನ್ನು ಬದಲಾಯಿಸುವ ಬೇಡಿಕೆ ಇದ್ದಾಗ್ಯೂ ಬದಲಾಯಿಸದಿರಲು ಕಾರಣ ಏನು ;

(ಇ) ಜಮಖಂಡಿಯಿಂದ ಮೂರು, ನಾಲ್ಕು ಖಾಸಗಿ ಸ್ಲೀಪರ್ ಬಸ್ಸುಗಳು ಸಂಚರಿಸುತ್ತಿರುವಾಗ ಸರಕಾರಿ ಬಸ್ಸುಗಳಿಗೆ ಪ್ರಯಾಣಿಕರ ಕೊರತೆ ಇದೆ ಎನ್ನಲು ಕಾರಣವೇನು ?

## ಗಂಡು ಮತ್ತು ಹೆಣ್ಣು ಮಕ್ಕಳ ವಸತಿ ನಿಲಯಗಳ ಅವ್ಯವಸ್ಥೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೯ (೧೬೫೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಇರುವ ಹಿಂದುಳಿದ ವರ್ಗ, ಅಲ್ಪಸಂಖ್ಯಾತ ವಿದ್ಯಾರ್ಥಿ/ವಿದ್ಯಾರ್ಥಿನಿಯರ ವಸತಿ ನಿಲಯಗಳು ಎಷ್ಟು ; ಮೆಟ್ರಿಕ್ ಪೂರ್ವ ಮತ್ತು ನಂತರವೂ ಸೇರಿದಂತೆ ಜಿಲ್ಲಾವಾರು, ತಾಲ್ಲೂಕುವಾರು ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ಈ ವಿದ್ಯಾರ್ಥಿ ನಿಲಯಗಳಲ್ಲಿ ದಾಖಲಾತಿ ಕೋರಿ ಇರುವ ಬೇಡಿಕೆ ಎಷ್ಟು ; ಎಷ್ಟು ವಿದ್ಯಾರ್ಥಿ/ವಿದ್ಯಾರ್ಥಿನಿಯರುಗಳ ದಾಖಲಾತಿಗೆ ಅವಕಾಶಗಳು ಇವೆ ; ಕೊರತೆ ನೀಗಿಸುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು (ಮಾಹಿತಿ ಒದಗಿಸುವುದು) ;

(ಇ) ಹಲವಾರು ವಿದ್ಯಾರ್ಥಿನಿಲಯಗಳಲ್ಲಿ ಕೊರತೆಯ ಬಹು ದೊಡ್ಡ ಬೇಡಿಕೆ, ಅವ್ಯವಸ್ಥೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು (ಸಂಪೂರ್ಣ, ಪ್ರತ್ಯೇಕ ಮಾಹಿತಿ ಒದಗಿಸುವುದು) ?

## ಮೈಸೂರು ಚಾಮುಂಡಿ ಬೆಟ್ಟಕ್ಕೆ ಪ್ರತ್ಯೇಕ ಬಸ್ ವ್ಯವಸ್ಥೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೨೦ (೧೬೫೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಚಾಮುಂಡಿ ಬೆಟ್ಟದ ಮೇಲೆ ಖಾಸಗಿ ಬಸ್‌ಗಳ ಸಂಖ್ಯೆ ದಿನೇ ದಿನೇ ಜಾಸ್ತಿಯಾಗುತ್ತಿದ್ದು, ನಿಲ್ಲಿಸಲು ಜಾಗ ಇಲ್ಲದ ಪರಿಸ್ಥಿತಿ ಬರುತ್ತಿರುವುದರಿಂದ, ಆಂಧ್ರ ಪ್ರದೇಶದ ತಿರುಪತಿಯ ತಿರುಮಲ ಬೆಟ್ಟಕ್ಕೆ ಏರ್ಪಡಿಸಿರುವಂತೆ, ಬೆಟ್ಟದ ಕೆಳಗೆ ಒಂದು ದೊಡ್ಡ ಬಸ್‌ನಿಲ್ದಾಣ ಮಾಡಿ ಇಲ್ಲಿಂದ ಕೇವಲ ಮೈಸೂರು ನಗರ ಸಾರಿಗೆಯ ಸರ್ಕಾರಿ ಬಸ್ಸುಗಳು ಮಾತ್ರ ಬೆಟ್ಟದ ಮೇಲಕ್ಕೆ ಹೋಗಿ ಬರುವ ವ್ಯವಸ್ಥೆ ಮಾಡಲಾಗುವುದೇ ;

(ಆ) ಇದರಿಂದ ಬೆಟ್ಟದ ಮೇಲೆ ಬಸ್‌ಗಳ ದಟ್ಟಣೆಯನ್ನು ತಡೆಗಟ್ಟುವುದರ ಜೊತೆಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೂ ಲಾಭವಾಗುವುದು ಮತ್ತು ಪ್ರಯಾಣಿಕರ ಸುರಕ್ಷತೆಯೂ ಆಗುವುದಿಲ್ಲವೇ ?

## ಗಿರಿಜನರಿಗೆ ಸೌಲಭ್ಯ ನೀಡಿಕೆ

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೨೧ (೧೬೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಣ್ಯ ಹಕ್ಕು ಕಾಯಿದೆ ಅನ್ವಯ ಮೈಸೂರು ಮತ್ತು ಚಾಮರಾಜ ನಗರ ಜಿಲ್ಲೆಯ ಗಿರಿಜನರಿಗೆ ಕಲ್ಪಿಸಿರುವ ಸೌಲಭ್ಯಗಳೇನು ;

(ಆ) ಈ ಕಾಯಿದೆ ಪ್ರಕಾರ ಎಷ್ಟು ಕುಟುಂಬಗಳಿಗೆ ಭೂಮಿಯ ಹಕ್ಕನ್ನು ಎಷ್ಟು ಪೋಡಿಗಳಿಗೆ ಸಮುದಾಯದ ಹಕ್ಕನ್ನು ನೀಡಬೇಕಾಗಿರುತ್ತದೆ ; ಇದುವರೆಗೆ ಎಷ್ಟು ಕುಟುಂಬಗಳಿಗೆ ಭೂಮಿಯ ಹಕ್ಕನ್ನು ಎಷ್ಟು ಪೋಡಿಗಳಿಗೆ ಸಮುದಾಯದ ಹಕ್ಕನ್ನು ನೀಡಲಾಗಿದೆ ;

(ಇ) ಗಿರಿಜನ ಹಾಡಿಗಳಿಗೆ ಕಳಪೆ ಪಡಿತರ ಒದಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಿ.ಆರ್.ಟಿ. ಹುಲಿ ಯೋಜನೆ ನಿರ್ದೇಶಕರು, ಅರಣ್ಯ ಸಂರಕ್ಷಣಾಧಿಕಾರಿಗಳು ಪೋಡಿಗಳಲ್ಲಿ ಗಿರಿಜನರಿಗೆ ಮನೆ ನಿರ್ಮಾಣಕ್ಕೆ ಸಹಕರಿಸದೇ ಇರುವುದು ಕಂಡು ಬಂದಿದೆಯೇ ; ಗಿರಿಜನ ಪೋಡಿಗಳಲ್ಲಿ ಮನೆ ನಿರ್ಮಿಸಿಕೊಡಲು ಕೈಗೊಂಡಿರುವ ಕ್ರಮಗಳೇನು ; ಯಾವ ಯಾವ ಪೋಡಿಗಳಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ; ಉಳಿಕೆ ಮನೆಗಳನ್ನು ಯಾವಾಗ ನಿರ್ಮಿಸಿಕೊಡಲಾಗುವುದು ?

## ಲಾಭದಾಯಕವಾಗಿ ಓಡುತ್ತಿದ್ದ ಕೆ.ಎಸ್.ಆರ್.ಟಿ.ಸಿ. ಬಸ್ ಸಂಚಾರ ರದ್ದುಗೊಳಿಸಿದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೨೨ (೧೬೬೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳ ಓಡಾಟಕ್ಕೆ ಪ್ರಾರಂಭ ಮಾಡಿ ನಿಲ್ಲಿಸಿರತಕ್ಕಂತಹ ರಹದಾರಿಗಳು ಯಾವುವು ; ಈ ರೀತಿ ಪ್ರಾರಂಭ ಮಾಡಿ ನಿಲ್ಲಿಸಲು ಕಾರಣವೇನು (ರಹದಾರಿವಾರು ವಿವರ ನೀಡುವುದು) ;

(ಆ) ಕುಂದಾಪುರ–ಮೊಳಹಳ್ಳಿ–ಹಾಲಾಡಿ, ಕುಂದಾಪುರ–ಧರ್ಮಸ್ಥಳ, ಉಡುಪಿ–ಮಂತ್ರಾಲಯ ಮುಂತಾದ ಮಾರ್ಗವಾರು ಲಾಭದಾಯಕವಾಗಿ ಸಂಚರಿಸುತ್ತಿರುವ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳನ್ನು ಖಾಸಗಿಯವರ ಒತ್ತಡಕ್ಕೆ ಮಣಿದು ಸರ್ಕಾರ ಇವುಗಳ ಸಂಚಾರ ಸ್ಥಗಿತಗೊಳಿಸಿರುವುದು ನಿಜವೇ ?

## ಕೊರಗ ಕುಟುಂಬಗಳಿಗೆ ಪೌಷ್ಟಿಕ ಆಹಾರ ಪದಾರ್ಥಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೨೩ (೧೬೬೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆದಿದ್ರಾವಿಡ ಪಂಗಡಗಳೆಂದು ಗುರುತಿಸಲ್ಪಟ್ಟ ಪರಿಶಿಷ್ಟ ಪಂಗಡದ ಕೊರಗ ಕುಟುಂಬಗಳಿಗೆ ಪೌಷ್ಟಿಕ ಆಹಾರದ ರೂಪದಲ್ಲಿ ಪ್ರತೀ

ತಿಂಗಳು ನೀಡುತ್ತಿರುವ ಅಥವಾ ನೀಡಲು ಉದ್ದೇಶಿಸಿರುವ ಆಹಾರ ಪದಾರ್ಥಗಳು ಯಾವುವು ;

(ಆ) ರಾಜ್ಯದಲ್ಲಿ ೨೦೧೩-೧೪ನೇ ಸಾಲಿನಲ್ಲಿ ಕೊರಗ ಕುಟುಂಬಗಳಿಗೆ ಪೌಷ್ಟಿಕ ಆಹಾರದ ರೂಪದಲ್ಲಿ ಪ್ರತೀ ತಿಂಗಳು ನೀಡುತ್ತಿರುವ ಆಹಾರ ಪದಾರ್ಥಗಳನ್ನು ಯಾವ ಯೋಜನೆಯಡಿ ನೀಡಲಾಗಿದೆ ; ಎಷ್ಟು ಫಲಾನುಭವಿಗಳಿಗೆ ನೀಡಲಾಗಿದೆ ; ೨೦೧೪-೧೫ನೇ ಸಾಲಿನ ಗುರಿಯನ್ನು ನಿಗದಿಪಡಿಸಲಾಗಿದೆಯೇ (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು) ;

(ಇ) ಉಡುಪಿ ಜಿಲ್ಲೆಯಲ್ಲಿ ಒಟ್ಟು ಇರುವ ಕೊರಗ ಕುಟುಂಬಗಳ ಸಂಖ್ಯೆ ಎಷ್ಟು ; ಮತ್ತು ಮೇಲಿನ ಪ್ರಯೋಜನವನ್ನು ಪಡೆದ ಕೊರಗ ಕುಟುಂಬಗಳ ಸಂಖ್ಯೆ ಎಷ್ಟು (ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು) ; ಹಾಗೂ ಅಸಮರ್ಪಕ ವಿತರಣೆಯಿಂದ ಹೆಚ್ಚಿನ ಕೊರಗ ಕುಟುಂಬಗಳು ಮೇಲಿನ ಸೌಲಭ್ಯದಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ೧೦೮ ಸರ್ಕಾರಿ ಅಂಬ್ಯುಲೆನ್ಸ್‌ಗಳ ಸುಸ್ಥಿತಿ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :-

೧೩೨೪ (೧೬೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ೧೦೮ ಸರ್ಕಾರಿ ಅಂಬ್ಯುಲೆನ್ಸ್‌ಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಸುಸ್ಥಿತಿಯಲ್ಲಿರುವ ವಾಹನಗಳ ಸಂಖ್ಯೆ ಎಷ್ಟು ;

ಸುಸ್ಥಿತಿಯಲ್ಲಿ ಇಲ್ಲದೆ ಸೇವೆಯನ್ನು ನಿಲ್ಲಿಸಿರುವ ವಾಹನಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಆ) ಸುಸ್ಥಿತಿಯಲ್ಲಿ ಇಲ್ಲದೆ, ಸಂಚಾರಕ್ಕೆ ಯೋಗ್ಯವಲ್ಲದ ೧೦೮ ಸರ್ಕಾರಿ ಅಂಬ್ಯುಲೆನ್ಸ್‌ಗಳನ್ನು ಸೇವೆಗಾಗಿ ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

**ವಿತರಣೆಯಾಗುತ್ತಿರುವ ಪಡಿತರ ಸಾಮಾಗ್ರಿಗಳ ಗುಣಮಟ್ಟ**

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೨೫ (೧೬೬೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಡಿತರ ವಿತರಣಾ ವ್ಯವಸ್ಥೆಯಡಿ ಸಾರ್ವಜನಿಕರಿಗೆ ವಿತರಿಸಲಾಗುವ ಪಡಿತರ ಸಾಮಾಗ್ರಿಗಳು ಯಾವ ಗುಣಮಟ್ಟವನ್ನು ಹೊಂದಿರಬೇಕೆಂದು ಸರ್ಕಾರ ನಿಗದಿಪಡಿಸಿದೆ ;

(ಆ) ಪಡಿತರ ವಿತರಣಾ ವ್ಯವಸ್ಥೆಯಡಿ ಸಾರ್ವಜನಿಕರಿಗೆ ವಿತರಿಸಲಾಗುವ ಪಡಿತರ ಸಾಮಾಗ್ರಿಗಳ ಗುಣಮಟ್ಟವನ್ನು ಪರೀಕ್ಷಿಸಲು ಇಲಾಖೆ ಪ್ರಸ್ತುತ ಹೊಂದಿರುವ ವ್ಯವಸ್ಥೆಗಳೇನು ;

(ಇ) ರಾಜ್ಯದಲ್ಲಿ ವಿತರಣೆಯಾಗುವ ಪಡಿತರ ಸಾಮಾಗ್ರಿಗಳು ಕಳಪೆ ಗುಣಮಟ್ಟದ್ದಾಗಿರುವ ಕುರಿತು ಬೇರೆ ಬೇರೆ ಜಿಲ್ಲೆಗಳಿಂದ ಎಷ್ಟು ದೂರುಗಳು ಬಂದಿವೆ (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು) ; ದೂರುಗಳು ಬಂದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

F. 3 15/13

## ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳ ತ್ಯಾಜ್ಯ ವಿಲೇವಾರಿ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :-

೧೩೨೬ (೧೬೫೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಜಿಲ್ಲಾ ಸರ್ಕಾರಿ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಖಾಸಗಿ ಆಸ್ಪತ್ರೆಗಳ ತ್ಯಾಜ್ಯವನ್ನು ವಿಲೇವಾರಿ ಮಾಡಲು ಸರ್ಕಾರಿ ಅಥವಾ ಖಾಸಗಿ ತ್ಯಾಜ್ಯ ವಿಲೇವಾರಿ ಸ್ಥಳವನ್ನು ಕಾಯ್ದಿರಿಸಲಾಗಿದೆಯೇ ; ಇಲ್ಲವಾದಲ್ಲಿ, ಈ ತ್ಯಾಜ್ಯಗಳನ್ನು ರಸ್ತೆಯ ಇಕ್ಕೆಲಗಳಲ್ಲಿ, ಜನವಸತಿ ಪ್ರದೇಶಗಳಲ್ಲಿ ಬೇಕಾಬಿಟ್ಟಿ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲ್ಲವಾದಲ್ಲಿ ತ್ಯಾಜ್ಯವನ್ನು ಎಲ್ಲಿ ಹಾಕುತ್ತಾರೆ ಎನ್ನುವ ಅರಿವು ಸರ್ಕಾರಕ್ಕಿದೆಯೇ ;

(ಆ) ಜಿಲ್ಲಾ ಸರ್ಕಾರಿ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಖಾಸಗಿ ಆಸ್ಪತ್ರೆಗಳ ತ್ಯಾಜ್ಯಗಳನ್ನು ವಾಹನಗಳಲ್ಲಿ ಬೇರೆಡೆಗೆ ಸಾಗಿಸಲು ಪರವಾನಿಗೆಯನ್ನು ನೀಡಲಾಗಿದೆಯೇ ಹಾಗೂ ಇಂತಹ ತ್ಯಾಜ್ಯಗಳನ್ನು ವಿಲೇವಾರಿ ಮಾಡಲು ಹೊರಗುತ್ತಿಗೆ ನೀಡಲಾಗಿದೆಯೇ ; ನೀಡಲಾಗಿದ್ದಲ್ಲಿ ಗುತ್ತಿಗೆ ಪಡೆದವರು ತ್ಯಾಜ್ಯವನ್ನು ಎಲ್ಲಿ ವಿಲೇವಾರಿ ಮಾಡುತ್ತಾರೆ ಎನ್ನುವ ಮಾಹಿತಿ ಸರ್ಕಾರಕ್ಕಿದೆಯೇ ?

## ಮಂಡ್ಯ ವೈದ್ಯಕೀಯ ಶಿಕ್ಷಣ ಸಂಸ್ಥೆಯಲ್ಲಿ ಅವ್ಯವಹಾರದ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೨೭ (೧೬೮೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಮಂಡ್ಯ ವೈದ್ಯಕೀಯ ಶಿಕ್ಷಣ ಸಂಸ್ಥೆಯಲ್ಲಿ ನಡೆದಿದೆ ಎನ್ನಲಾದ ಎಷ್ಟು ಅವ್ಯವಹಾರ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅವುಗಳು ಯಾವುವು (ಪೂರ್ಣ ವಿವರ ನೀಡುವುದು) ;

(ಇ) ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿಚಾರಣಾ ಹಂತಗಳ ವಿವರಗಳನ್ನೊದಗಿಸುವುದು) ;

(ಈ) ಈ ಅವ್ಯವಹಾರಗಳಲ್ಲಿ ಭಾಗಿಯಾದ ಅಧಿಕಾರಿಗಳು ಎಷ್ಟು (ಅವರುಗಳ ಪೂರ್ಣ ಮಾಹಿತಿ ಒದಗಿಸುವುದು) ;

(ಉ) ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು (ಪೂರ್ಣ ವರದಿ ನೀಡುವುದು) ?

## ಸಮಾಜ ಕಲ್ಯಾಣ ಇಲಾಖೆಯ ದಿನಗೂಲಿ ನಿಗದಿತ ನೌಕರರ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೨೮ (೧೬೬೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ ೨೦೧೨ರನ್ವಯ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಅಥವಾ ಅದರ ಅಧೀನದಲ್ಲಿ ನಿಗಮ/ಸಂಸ್ಥೆಗಳಲ್ಲಿ ದಿನಗೂಲಿ/ನಿಗದಿತ ವೇತನ ಪಡೆಯುತ್ತಿರುವ ನೌಕರರು ಎಷ್ಟು ;

(ಆ) ದಿನಾಂಕ : ೧೦ನೇ ಏಪ್ರಿಲ್ ೨೦೦೬ಕ್ಕೆ ೧೦ ವರ್ಷಗಳಿಗೂ ಕಡಿಮೆ ಇರದಂತೆ ಕಾರ್ಯ ನಿರ್ವಹಿಸಿ ಸೇವೆ ಪೂರ್ಣಗೊಳಿಸಿರುವ ನೌಕರರು ಎಷ್ಟು (ಅವರ ಹೆಸರು, ಹುದ್ದೆ, ಕೆಲಸಕ್ಕೆ ಸೇರಿದ ದಿನಾಂಕವಾರು ಮಾಹಿತಿ ನೀಡುವುದು) ;

(ಇ) ಈ ನೌಕರರನ್ನು ಖಾಯಂಗೊಳಿಸುವ ಬಗ್ಗೆ ಗೆಜೆಟ್ ಹೊರಡಿಸಲು ಕಾಲಾವಕಾಶ ನಿಗದಿಪಡಿಸಿ ಸರ್ಕಾರವು ಎಲ್ಲಾ ಇಲಾಖೆಗಳಿಗೆ/ ಮುಖ್ಯಸ್ಥರಿಗೆ ನಿರ್ದೇಶನ ನೀಡಲಾಗಿದೆಯೇ (ಇದ್ದಲ್ಲಿ ಆದೇಶದ ಪ್ರತಿ ನೀಡುವುದು) ;

(ಈ) ಸದರಿ ಆದೇಶದಂತೆ ಈ ನೌಕರರನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರದಿಂದ ಗೆಜೆಟ್ ಹೊರಡಿಸಲು ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿರುವ ನಿಗಮ/ಸಂಸ್ಥೆಗಳಿಂದ ಸರ್ಕಾರಕ್ಕೆ ಮಾಹಿತಿ ಸಲ್ಲಿಸಲಾಗಿದೆಯೇ ;

(ಉ) ನಿಗದಿತ ಸಮಯದಲ್ಲಿ ಗೆಜೆಟ್ ಹೊರಡಿಸಲಾಗಿದೆಯೇ ; ಹೊರಡಿಸಿದ್ದಲ್ಲಿ, ಯಾವ ಯಾವ ನಿಗಮ/ಸಂಸ್ಥೆಗಳಿಂದ ಗೆಜೆಟ್ ಹೊರಡಿಸಲಾಗಿದೆ (ಅವುಗಳ ಪ್ರತಿ ನೀಡುವುದು) ;

(ಊ) ಗೆಜೆಟ್ ಹೊರಡಿಸದಿದ್ದಲ್ಲಿ, ಕಾರಣವೇನು ; ಇದರಿಂದ ಸರ್ಕಾರದ ಆದೇಶವನ್ನು ಉಲ್ಲಂಘಿಸಿದಂತಾಗಲಿಲ್ಲವೇ ; ಇನ್ನು ಎಷ್ಟು ಸಮಯಾವಕಾಶದಲ್ಲಿ ಗೆಜೆಟ್ ಹೊರಡಿಸಲಾಗುವುದು (ನಿಗದಿತ ದಿನಾಂಕವನ್ನು ತಿಳಿಸುವುದು) ?

## ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ದಿನಗೂಲಿ/ ನಿಗದಿತ ವೇತನದ ನೌಕರರು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೨೯ (೧೬೬೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೨ನೇ ಸಾಲಿನಿಂದ ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿ/ಜಿಲ್ಲಾ ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ/ನಿಗದಿತ ವೇತನದ ನೌಕರರ ಸಂಖ್ಯೆ ಎಷ್ಟು (ಹೆಸರು, ಹುದ್ದೆ, ಕೆಲಸಕ್ಕೆ ಸೇರಿದ ದಿನಾಂಕ ಮತ್ತು ವಿದ್ಯಾರ್ಹತೆ ಸಹಿತ ವಿವರ ನೀಡುವುದು) ;

(ಆ) ೧೯೯೨ನೇ ಸಾಲಿನಿಂದ ಈ ದಿನಾಂಕದವರೆಗೆ ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಈ ನೌಕರರ ವಿಷಯ ಕುರಿತು ಮಂಡಿಸಿದ ವಿಷಯ ಹಾಗೂ ಸಭೆಯಲ್ಲಿ ಕೈಗೊಂಡ ನಿರ್ಣಯ/ ತೀರ್ಮಾನದಂತೆ ಕ್ರಮ ವಹಿಸಲಾಗಿದೆಯೇ ; ವಹಿಸಿದ್ದಲ್ಲಿ, ಅದರ ಪ್ರತಿ ಹಾಗೂ ನಡವಳಿಗಳ (Proceedings) ಪ್ರತಿ ಒದಗಿಸುವುದು ; ಕ್ರಮ ವಹಿಸದಿದ್ದಲ್ಲಿ, ಸಕಾರಣ ತಿಳಿಸುವುದು ಹಾಗೂ ಇವರಿಗೆ ನೀಡುತ್ತಿರುವ ಇನ್ನಿತರೇ ಸೌಲಭ್ಯಗಳಾವುವು ;

(ಇ) ಈ ನೌಕರರಿಗೆ ಇ.ಪಿ.ಎಫ್. ಸೌಲಭ್ಯವಿದೆಯೇ ; ಇದ್ದಲ್ಲಿ, ಕೆಲಸಕ್ಕೆ ಸೇರಿದ ದಿನಾಂಕದಿಂದ ಇಲ್ಲಿಯವರೆವಿಗೂ ತಿಂಗಳವಾರು ಕಡಿತಗೊಳಿಸುತ್ತಿರುವ ಮೊತ್ತ ಹಾಗೂ ನಿಗಮದ ಪಾಲನ್ನು ಒಳಗೊಂಡಂತೆ ಮಾಹಿತಿ ನೀಡುವುದು (ಪ್ರತಿ ನೌಕರವಾರು) ;

(ಈ) ನಿಗಮದ ಖಾಯಂ ನೌಕರರಿಗೆ ಪ್ರತಿ ಮಾಹೆ ವೇತನ ಚೀಟಿಯನ್ನು (Pay Slip) ನೀಡುತ್ತಿರುವಂತೆ ಇವರುಗಳಿಗೆ ವೇತನ ಚೀಟಿಯನ್ನು ನೀಡಲಾಗುತ್ತಿದೆಯೇ ; ಇದ್ದಲ್ಲಿ, ಅದರ ಪ್ರತಿ ನೀಡುವುದು ; ಇಲ್ಲದಿದ್ದಲ್ಲಿ ಏಕೆ ವಿತರಿಸುತ್ತಿಲ್ಲ ; ಇದಕ್ಕೆ ಕಾನೂನಿನ ತೊಡಕಿದೆಯೇ ; ಇನ್ನು ಮುಂದಾದರೂ ವಿತರಿಸಲಾಗುವುದೇ ;

(ಉ) ಬೇರೆ ಇಲಾಖೆಗಳಲ್ಲಿ ದಿನಗೂಲಿ/ನಿಗದಿತ ಖಾಯಂಗೊಳಿಸಿದಂತೆ, ನಿಗಮದಲ್ಲಿ ಖಾಯಂಗೊಳಿಸಿರುವ ನೌಕರರ ಸಂಖ್ಯೆ ಎಷ್ಟು ; ಹೆಸರು, ಕೆಲಸಕ್ಕೆ ಸೇರಿದ ದಿನಾಂಕ ಮತ್ತು ಖಾಯಂಗೊಂಡ ದಿನಾಂಕವಾರು ವಿವರ ನೀಡುವುದು ; ಇಲ್ಲದಿದ್ದಲ್ಲಿ ಕಾರಣವೇನು (ವಿವರ ನೀಡುವುದು) ?

## ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ವಿಮಾನಯಾನ ಕೈಗೊಂಡಿರುವ ಅಧಿಕಾರಿ/ನೌಕರರು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೩೩೦ (೧೬೬೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಏಪ್ರಿಲ್ ೨೦೧೩ ರಿಂದ ಇಲ್ಲಿಯವರೆವಿಗೂ ಯಾವ್ಯಾವ ಅಧಿಕಾರಿಗಳ ವಿಮಾನ ಪ್ರಯಾಣಕ್ಕೆ ಎಷ್ಟೆಷ್ಟು ವೆಚ್ಚ ಮಾಡಲಾಗಿದೆ (ವಿವರ ನೀಡುವುದು) ;

(ಆ) ಯಾವ ಯಾವ ಉದ್ದೇಶಗಳಿಗೆ, ಯಾವ ಯಾವ ದಿನಾಂಕಗಳಂದು ವಿಮಾನ ಪ್ರಯಾಣ ಮಾಡಲಾಗಿದೆ ಎಂಬ ವಿವರಗಳನ್ನು ನೀಡುವುದು ;

(ಇ) ವಿಮಾನದಲ್ಲಿ ಪ್ರಯಾಣಿಸಲು ನಿಗಮದ ನಿಯಮಾವಳಿಗಳಲ್ಲಿ ಅವಕಾಶವಿದೆಯೇ ಅಥವಾ ಸರ್ಕಾರಿ ಆದೇಶವಿದೆಯೇ ; ಇದ್ದಲ್ಲಿ, ಅದರ ಪ್ರತಿ ಒದಗಿಸುವುದು ; ಇಲ್ಲದಿದ್ದಲ್ಲಿ, ರಿಯಾಯತಿ ಪಡೆದು ವಿಮಾನದಲ್ಲಿ ಪ್ರಯಾಣಿಸಿದವರು ಯಾರ್‍ಯಾರು ; ಈ ರೀತಿ ಪ್ರಯಾಣಿಸಲು ಕಾರಣವೇನು (ಸಂಪೂರ್ಣ ವಿವರಗಳನ್ನು ಒದಗಿಸುವುದು) ?

## ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವಾಹನಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೩೩೧ (೧೬೬೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ॥ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿ ಹಾಗೂ ಇತರ ವಿಭಾಗೀಯ ಜಿಲ್ಲಾ ಕಛೇರಿಗಳಲ್ಲಿರುವ ಒಟ್ಟು ಸರ್ಕಾರಿ ವಾಹನಗಳ ಸಂಖ್ಯೆ ಎಷ್ಟು ; ವಾಹನಗಳ ವಿವರ ಮತ್ತು ಮಾದರಿಗಳನ್ನು ನೀಡುವುದು ; ಸರ್ಕಾರಿ ವಾಹನಗಳಲ್ಲದೇ ಖಾಸಗಿಯಾಗಿ ಎಷ್ಟು ವಾಹನಗಳನ್ನು ಬಾಡಿಗೆಗೆ ತೆಗೆದುಕೊಳ್ಳಲಾಗಿದೆ ; ಯಾವ ಯಾವ ರೀತಿಯ ವಾಹನಗಳನ್ನು ತೆಗೆದುಕೊಳ್ಳಲಾಗಿದೆ ; ಯಾವ ದಿನಾಂಕದಿಂದ ಎಷ್ಟು ಬಾಡಿಗೆಯನ್ನು ನಿಗದಿಪಡಿಸಲಾಗಿದೆ ; ಈವರೆಗೂ ಪ್ರತಿ ವಾಹನವಾರು ನೀಡಿರುವ ಹಣದ ಬಾಬ್ತುಗಳ ವಿವರ ನೀಡುವುದು ;

(ಆ) ಸದರಿ ನಿಗಮದಲ್ಲಿ ಇರುವ ಒಟ್ಟು ವಾಹನ ಚಾಲಕರೆಷ್ಟು ; ಇವರಲ್ಲಿ ಸರ್ಕಾರಿ ದಿನಗೂಲಿ ಮತ್ತು ಹೊರಗುತ್ತಿಗೆ ಆಧಾರದಲ್ಲಿ

ಕರ್ತವ್ಯ ನಿರ್ವಹಿಸುತ್ತಿರುವವರೆಷ್ಟು ; ಬಾಡಿಗೆ ರೂಪದಲ್ಲಿ ತೆಗೆದುಕೊಂಡಿರುವ ಖಾಸಗಿ ವಾಹನಗಳನ್ನು ಯಾರು ಚಾಲನೆ ಮಾಡುತ್ತಿದ್ದಾರೆ ; ಈ ಖಾಸಗಿ ವಾಹನಗಳ ಅವಶ್ಯಕತೆ ಇದೆಯೇ ;

(ಇ) ಈ ಸರ್ಕಾರಿ ಮತ್ತು ಖಾಸಗಿ ವಾಹನಗಳನ್ನು ಯಾವ್ಯಾವ ಅಧಿಕಾರಿಗಳು ಉಪಯೋಗಿಸುತ್ತಿದ್ದಾರೆ (ವಿವರ ನೀಡುವುದು) ಈ ವಾಹನಗಳನ್ನು ಸರ್ಕಾರಿ ನಿಯಮಗಳಂತೆ ಅರ್ಹತೆಯಿರುವ ಅಧಿಕಾರಿಗಳು ಮಾತ್ರವೇ ಉಪಯೋಗಿಸುತ್ತಿದ್ದಾರೆಯೇ ; ಇಲ್ಲದಿದ್ದಲ್ಲಿ, ಅರ್ಹತೆಯಿಲ್ಲದವರು ಏಕೆ ಉಪಯೋಗಿಸುತ್ತಿದ್ದಾರೆ ;

(ಈ) ಈ ವಾಹನಗಳಿಗೆ ಏಪ್ರಿಲ್ ೨೦೧೩ರಿಂದ ಇಲ್ಲಿಯವರೆಗೂ ರಿಪೇರಿ ಹಾಗೂ ಇಂಧನ ಖರ್ಚಾಗಿರುವ (ವಿವರಗಳನ್ನು ನೀಡುವುದು) ?

## ಕುಣಬಿ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದು

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೩೨ (೧೬೭೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ದಟ್ಟ ಕಾಡುಗಳಲ್ಲಿ ವಾಸಿಸುವ ಕುಣಬಿ ಜನಾಂಗ ಸಾಮಾಜಿಕವಾಗಿ ಶೈಕ್ಷಣಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತ್ಯಂತ ಹಿಂದುಳಿದವರಾಗಿರುತ್ತಾರೆ ತನ್ನದೇ ಆದ ಸಂಸ್ಕೃತಿ ಹೊಂದಿದವರಾಗಿದ್ದು, ಬುಡಕಟ್ಟು ಸಂಸ್ಕೃತಿಯ ಎಲ್ಲಾ ಗುಣ ಲಕ್ಷಣಗಳನ್ನು ಹೊಂದಿರುತ್ತಾರೆ, ಕಳೆದ ಹಲವಾರು ವರ್ಷಗಳಿಂದ ಕುಣಬಿ ಸಮಾಜ ಪರಿಶಿಷ್ಟ ಪಂಗಡಕ್ಕೆ ಸೇರಿಸಲು

ಒತ್ತಾಯಿಸುತ್ತಾ ಬಂದರೂ ಯಾವುದೇ ಪ್ರಯೋಜನ–ವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ (ವಿವರ ನೀಡುವುದು) ;

(ಆ) ಇವರನ್ನು ಯಾವ ಕಾರಣಕ್ಕಾಗಿ ಇಲ್ಲಿಯವರೆಗೆ ಪರಿಶಿಷ್ಟ ಪಂಗಡಕ್ಕೆ ಸೇರಿಸಿರುವುದಿಲ್ಲ ; ಈ ಕುರಿತು ಸರ್ಕಾರ ಕೂಡಲೇ ಕ್ರಮಕೈಗೊಳ್ಳುವುದೇ (ವಿವರ ನೀಡುವುದು) ?

## ವಸತಿ ಶಾಲೆಗಳ ಅವ್ಯವಸ್ಥೆ

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೩೩ (೧೬೭೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ವಸತಿ ಶಾಲೆ ವಿದ್ಯಾರ್ಥಿಗಳ ಅವಸ್ಥೆ ಚಿಂತಾಜನಕವಾಗಿದ್ದು, ಈ ಕುರಿತು ಸಾರ್ವಜನಿಕರು ಹೋರಾಟ ಹಾದಿ ತುಳಿಯುವುದೊಂದೆ ಬಾಕಿ ಇರುತ್ತದೆಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ (ವಿವರ ನೀಡುವುದು) ;

(ಆ) ಜಿಲ್ಲೆಯಲ್ಲಿ ಬಹಳಷ್ಟು ರೈತರ, ಬಡ ಕೂಲಿ ಕಾರ್ಮಿಕರ ಮಕ್ಕಳು ಅವರ ಆರ್ಥಿಕ ಪರಿಸ್ಥಿತಿ ತೊಂದರೆಯಲ್ಲಿರುವುದರಿಂದ ವಸತಿ ಶಾಲೆಗಳಿಗೆ ಮಕ್ಕಳನ್ನು ಸೇರ್ಪಡೆ ಮಾಡಲು ವಂಚಿತರಾಗಿರುವುದರಿಂದ, ಅವರಿಗೆ ಈಗ ಸದರಿ ವಸತಿ ಶಾಲೆಯಲ್ಲಿ ಪ್ರವೇಶ ಅವಕಾಶ ಸಿಗದೇ ಇರುವುದರಿಂದ ಅವರ ಮಕ್ಕಳ ಪರಿಸ್ಥಿತಿ ತೊಂದರೆಯಲ್ಲಿರುವುದನ್ನು ಸರ್ಕಾರ ಗಮನಿಸಿರುತ್ತದೆಯೇ ; ಇದಕ್ಕೆ ಪರ್ಯಾಯ ವ್ಯವಸ್ಥೆ ಸರ್ಕಾರ ಮಾಡುವುದೇ (ವಿವರ ನೀಡುವುದು) ?

## ಮೆಟ್ರಿಕ್ಯೂಲೇಶನ್ ಹಾಸ್ಟೆಲ್ ಪ್ರಾರಂಭಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೩೪ (೧೬೭೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕಿನ ಕಾರಿಮನಿ ಗ್ರಾಮದ ಪ್ರೌಢಶಾಲೆಯಲ್ಲಿ ಕಲಿಯುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಸಲುವಾಗಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳ ಹಾಸ್ಟೆಲ್ ಪ್ರಾರಂಭಿಸಲು ಸಾರ್ವಜನಿಕರ ಒತ್ತಾಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಶಾಲೆಯಲ್ಲಿ ದುಂಡನಕೊಪ್ಪ, ಕಾರಿಮನಿ, ಸೊಗಲ, ರುದ್ರಾಪೂರ, ಗ್ರಾಮದಲ್ಲಿ ಹೆಚ್ಚಾಗಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಇರುತ್ತಾರೆ ಎಂಬ ಸಂಗತಿ ಸರ್ಕಾರಕ್ಕೆ ತಿಳಿದಿದೆಯೇ ;

(ಇ) ಈ ಗ್ರಾಮಗಳ ವಿದ್ಯಾರ್ಥಿಗಳ ಅನುಕೂಲತೆಗಾಗಿ ಎಲ್ಲ ಮೂಲಭೂತ ಸೌಕರ್ಯ ಹೊಂದಿದ ಕಾರಿಮನಿ ಪ್ರೌಢಶಾಲೆಯ ವಿದ್ಯಾರ್ಥಿಗಳ ಸಲುವಾಗಿ ಮೆಟ್ರಿಕ್ ಪೂರ್ವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಸ್ಟೆಲ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಬೆಳಗಾವಿ ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಂಚಾಲಿತ ಡಾ: ಸ.ಜ. ನಾಗಲೋತಿಮಠ ವಿಜ್ಞಾನ ಕೇಂದ್ರಕ್ಕೆ ಆರ್ಥಿಕ ನೆರವು ನೀಡುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೩೫ (೧೬೭೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ನಗರದಲ್ಲಿ ಬೆಳಗಾವಿ ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಂಚಾಲಿತ ಡಾ: ಸ.ಜ. ನಾಗಲೋತಿಮಠ ವಿಜ್ಞಾನ ಕೇಂದ್ರಕ್ಕೆ ಆರ್ಥಿಕ ನೆರವು (ಬೆಂಗಳೂರಿನ ಜವಾಹರಲಾಲ್ ನೆಹರೂ ತಾರಾಲಯ ಮತ್ತು ಕರ್ನಾಟಕ ವಿಜ್ಞಾನ ಪರಿಷತ್‌ಗೆ ನೀಡಿದಂತೆ) ನೀಡುವಂತೆ ಕೋರಿ ಮನವಿ ಬಂದಿದೆಯೇ ;

(ಆ) ಈ ಸಂಸ್ಥೆಯು ಬಿ.ಪಿ.ಟಿ. ಆಕ್ಟ್ ೧೯೫೦ರ ಪ್ರಕಾರ ರಿಜಿಸ್ಟರ್ ಆಗಿ ವಿದ್ಯಾರ್ಥಿಗಳಿಗೆ, ಶಿಕ್ಷಕರಿಗೆ ವೈಜ್ಞಾನಿಕ ತರಬೇತಿ ನೀಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇಲ್ಲಿ ಪ್ರಯೋಗಾಲಯ ಕಟ್ಟಡ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಉಪಹಾರ ಗೃಹ, ಪ್ರತ್ಯೇಕ ಮೂತ್ರಾಲಯ ಮತ್ತು ಶೌಚಾಲಯ ಇಲ್ಲದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ರಾಜ್ಯ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಿಂದ ಬೆಂಗಳೂರಿನ ಜವಾಹರ್‌ಲಾಲ್ ನೆಹರೂ ತಾರಾಲಯ ಮತ್ತು ಕರ್ನಾಟಕ ವಿಜ್ಞಾನ ಪರಿಷತ್, ಕಿಯೋನಿಕ್ಸ್ ಮತ್ತು ಬರಗಾಲ ಉಸ್ತುವಾರಿ ಕೋಶಗಳಿಗೆ ಸಹಾಯ

ಮಾಡಿದಂತೆ, ಈ ಸಂಸ್ಥೆಗೂ ಕೂಡ, ಅವರ ಕೋರಿಕೆಯಂತೆ ರೂ. ೮೮,೨೪,೬೪೭=೦೦ (ಎಂಬತ್ತೆಂಟು ಲಕ್ಷ ಇಪ್ಪತ್ನಾಲ್ಕು ಸಾವಿರದ ಆರುನೂರಾ ನಲವತ್ತೇಳು) ಗಳನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಈ ಸಂಸ್ಥೆಯಲ್ಲಿ ಯಾವ ಯಾವ ಕಾರ್ಯಕ್ರಮಗಳು ನಡೆಯುತ್ತವೆ (ವಿವರ ನೀಡುವುದು) ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೩೬ (೧೬೭೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಎಷ್ಟು ವೈದ್ಯರ ಹುದ್ದೆಗಳು ಖಾಲಿ ಇವೆ (ಜಿಲ್ಲಾವಾರು ಮಾಹಿತಿ ನೀಡುವುದು) ;

(ಇ) ವೈದ್ಯರಿಗೆ ಕೊಡುತ್ತಿರುವ ಸಂಬಳ ಕಡಿಮೆ ಇರುವ ಕಾರಣ, ವೈದ್ಯರು ಸರ್ಕಾರಿ ಸೇವೆಗೆ ಬರಲು ಹಿಂದೇಟು ಹಾಕುತ್ತಿರುವ ಸಂಗತಿ ನಿಜವೇ ;

(ಈ) ಹಾಗಿದ್ದಲ್ಲಿ, ಅವರ ಸಂಬಳ ಹೆಚ್ಚಿಗೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಖಾಲಿ ಇರುವ ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ಬೆಳಗಾವಿ, ಬಾಗಲಕೋಟೆ ಹಾಗೂ ಬಿಜಾಪೂರ ಜಿಲ್ಲೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇರುತ್ತವೆ (ತಾಲ್ಲೂಕುವಾರು ವಿವರ ನೀಡುವುದು) ?

## ಕೆಲವು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಕೆ.ಎಲ್.ಇ. ಸಂಸ್ಥೆಯಿಂದ ನಿರ್ವಹಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೩೭ (೧೬೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲ್ಲೂಕಿನ ಕೆಲವು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಬೆಳಗಾವಿಯ ಕೆ.ಎಲ್.ಇ ಸಂಸ್ಥೆಗೆ ನಿರ್ವಹಿಸಲು ಕೊಟ್ಟ ಸಂಗತಿ ನಿಜವೇ ; ಯಾವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಕೊಡಲಾಗಿದೆ (ಹೆಸರು ಸಮೇತ ಮಾಹಿತಿ ನೀಡುವುದು) ;

(ಆ) ಕೆ.ಎಲ್.ಇ ಸಂಸ್ಥೆಯವರು ಅಲ್ಲಿ ಪಿ.ಹೆಚ್.ಸಿ.ಗಳನ್ನು ತೃಪ್ತಿಕರವಾಗಿ ನಡೆಸುತ್ತಿದ್ದು, ಅದೇ ಮಾದರಿಯಲ್ಲಿ (ಅದೇ ಟರ್ಮ್ಸ್ ಮತ್ತು ಕಂಡೀಷನ್ ಮೇಲೆ) ಬೈಲಹೊಂಗಲ ಮತ್ತು ಸವದತ್ತಿ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಕೆ.ಎಲ್.ಇ ಸಂಸ್ಥೆ. ಬೆಳಗಾವಿಗೆ, ನಡೆಸಲು ಕೊಡಲಾಗುವುದೇ; ಯಾವ ಟರ್ಮ್ಸ್ ಮತ್ತು ಕಂಡೀಷನ್ ಮೇಲೆ ಕೆ.ಎಲ್.ಇ. ಸಂಸ್ಥೆಗೆ ಕೊಡಲಾಗಿದೆ ;

(ಇ) ಕೆ.ಎಲ್.ಇ ಸಂಸ್ಥೆಗೆ ಕೊಟ್ಟ ಪಿ.ಹೆಚ್.ಸಿ. ಗಳಲ್ಲಿ ವೈದ್ಯರ ಮತ್ತು ಇತರೆ ಸಿಬ್ಬಂದಿ ಕೊರತೆ ಇಲ್ಲದೆ ಇರುವ ಸಂಗತಿ ನಿಜವೇ ;

(ಈ) ಹಳೇ ಮೈಸೂರು ಭಾಗದಲ್ಲಿ ಆಸ್ಪತ್ರೆಗಳನ್ನು ಮತ್ತು ಪಿ.ಹೆಚ್.ಸಿ.ಗಳನ್ನು ಮೆಡಿಕಲ್ ಕಾಲೇಜುಗಳಿಗೆ ನಿರ್ವಹಿಸಲು ಕೊಟ್ಟ ಸಂಗತಿ ನಿಜವೇ ; ಎಷ್ಟು ಆಸ್ಪತ್ರೆಗಳನ್ನು ಎಲ್ಲೆಲ್ಲಿ ಕೊಡಲಾಗಿದೆ ; (ವಿವರ ನೀಡುವುದು) ಯಾವ ಯಾವ ಮೆಡಿಕಲ್ ಕಾಲೇಜುಗಳಿಗೆ ಕೊಡಲಾಗಿದೆ ಮತ್ತು ಯಾವ ಟರ್ಮ್ಸ್ ಮತ್ತು ಕಂಡೀಷನ್ ಮೇಲೆ ಕೊಡಲಾಗಿದೆ ?

## ಮಡಿವಾಳ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೩೮ (೧೬೮೪) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಡಿವಾಳ ಸಮಾಜವನ್ನು ಕಳೆದ ಸರ್ಕಾರದ ಅವಧಿಯಲ್ಲಿ ಪರಿಶಿಷ್ಟ ಜಾತಿಗೆ ಸೇರ್ಪಡೆ ಮಾಡುವುದರ ಬಗ್ಗೆ ಸಚಿವ ಸಂಪುಟದ ಮುಂದೆ ಚರ್ಚೆಗೆ ಬಂದಿದ್ದಿತೇ ;

(ಆ) ಹಾಗಿದ್ದಲ್ಲಿ, ಹಿಂದುಳಿದ ವರ್ಗದ ಆಯೋಗದಿಂದ ಶಿಫಾರಸ್ಸಾಗಿರುವ ವಿಷಯ ಏಕೆ ಸಚಿವ ಸಂಪುಟದಲ್ಲಿ ಚರ್ಚೆಗೆ ಬರದಿರಲು ಕಾರಣವೇನು (ಪೂರ್ಣ ವಿವರ ನೀಡುವುದು) ;

(ಇ) ಅನ್ನಪೂರ್ಣಮ್ಮ ವರದಿಯಂತೆ ಶಿಫಾರಸ್ಸಾಗಿರುವ ವಿಷಯ ಸಚಿವ ಸಂಪುಟದಲ್ಲಿ ಇದವರೆಗೂ ಏಕೆ ಚರ್ಚೆಯಾಗಿಲ್ಲ (ವಿವರ ನೀಡುವುದು) ;

(ಈ) ಅನ್ನಪೂರ್ಣಮ್ಮ ವರದಿಯಂತೆ ಪರಿಶಿಷ್ಟ ಜಾತಿಗೆ ಸೇರಿಸಿರುವುದನ್ನು ಕೂಡಲೇ ಸಚಿವ ಸಂಪುಟದಲ್ಲಿಟ್ಟು ಕೇಂದ್ರಕ್ಕೆ ವರದಿ ಕಳುಹಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣ ವಿವರ ನೀಡುವುದು) ?

## ವಾಹನಗಳ ಪರವಾನಗಿ/ವೇಳಾಪಟ್ಟಿ ನಿಗದಿಗೊಳಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೩೯ (೧೬೮೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೯೯೦ ರಿಂದ ೨೦೧೪ವರೆಗೆ ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಂದ ಮಂಜೂರಾದ ಪರವಾನಗಿಗಳ ವಾಹನ ನೋಂದಣಿಗೆ ವೇಳಾ ಪಟ್ಟಿಯನ್ನು ನಿರ್ವಹಿಸಲು ಅರ್ಜಿಗಳ ಬಾಕಿ ಇದೆಯೇ (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ನ್ಯಾಯಾಲಯ ಆದೇಶ ನೀಡಿದ ನಂತರವು ಪರವಾನಿಗೆ ನೀಡಲು ಬಾಕಿ ಇರುವ ವೇಳಾಪಟ್ಟಿಯ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಪರವಾನಿಗೆ ನೀಡಲು ಬಾಕಿ ಇರುವ ಮತ್ತು ನೋಂದಾವಣಿಯ ವೇಳಾ ಪಟ್ಟಿಯನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿ ಸಕಾಲದಲ್ಲಿ ನಿರ್ವಹಿಸದೇ ಇರುವುದನ್ನು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣ ವಿವರ ನೀಡುವುದು) ?

## ಹಾಸ್ಟಲ್ ಸೌಲಭ್ಯ ಕಲ್ಪಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೪೦ (೧೬೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿರುವ ಬಡ ವಿದ್ಯಾರ್ಥಿಗಳಿಗೆ ತಂಗಲು ಹಾಸ್ಟಲ್ ಸೌಲಭ್ಯಕ್ಕೆ ಅರ್ಜಿ ಹಾಕಿದ ಎಷ್ಟು ದಿನಗಳಲ್ಲಿ ಸೌಲಭ್ಯ ಕಲ್ಪಿಸಲಾಗುವುದು ;

(ಆ) ಶಾಲಾ ಕಾಲೇಜುಗಳು ಆರಂಭವಾಗಿದ್ದರೂ ಹಾಸ್ಟಲ್ ಸೌಲಭ್ಯಕ್ಕೆ ಅರ್ಜಿ ಹಾಕಿದ ಪ್ರಕ್ರಿಯೆ ಇನ್ನೂ ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದರಿಂದಾಗಿ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮಾಡಲು ತೊಂದರೆ ಅಗುವುದಿಲ್ಲವೇ ;

(ಈ) ಈ ಬಗ್ಗೆ ಕೈಗೊಂಡ ಕ್ರಮವೇನು (ಪೂರ್ಣ ವಿವರ ನೀಡುವುದು) ?

## ಬಿಪಿಎಲ್ ಪಡಿತರದಾರರಿಗೆ ಪಡಿತರ ವಿತರಣೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೪೧ (೧೬೮೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೧೨-೧೩ ಮತ್ತು ೨೦೧೩-೧೪ನೇ ಸಾಲಿನಲ್ಲಿ ಹೊಸದಾಗಿ ಬಿ.ಪಿ.ಎಲ್ ಕಾರ್ಡ್‌ಗೆ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು) ;

(ಆ) ಅರ್ಜಿ ಸಲ್ಲಿಸಿದ ಎಲ್ಲಾ ಅರ್ಜಿದಾರರಿಗೆ ಬಿ.ಪಿ.ಎಲ್ ಕಾರ್ಡ್ ವಿತರಣೆಯಾಗಿದೆಯೇ (ಜಿಲ್ಲಾವಾರು ತಾಲ್ಲೂಕುವಾರು ಪೂರ್ಣ ವಿವರ ನೀಡುವುದು) ;

(ಇ) ವಿತರಣೆಯಾಗದಿದ್ದಲ್ಲಿ, ಇದುವರೆಗೂ ಕಾರ್ಡ್ ನೀಡದಿರಲು ಕಾರಣವೇನು (ಜಿಲ್ಲಾವಾರು ತಾಲ್ಲೂಕುವಾರು ಪೂರ್ಣ ವಿವರ ನೀಡುವುದು) ;

(ಈ) ವಿತರಣೆಯಾದ ಬಿ.ಪಿ.ಎಲ್ ಪಡಿತರದಾರರಿಗೆ ಪಡಿತರ ವಿತರಣೆಯಾಗುತ್ತಿದೆಯೇ ; ವಿತರಣೆಯಾಗದಿದ್ದರೆ ಎಷ್ಟು ಪಡಿತರ ಅಕ್ಕಿ ಪ್ರತಿ ಜಿಲ್ಲೆಗೆ ವಿತರಣೆಯಾಗಬೇಕಿದೆ (ಪೂರ್ಣ ವಿವರ ನೀಡುವುದು) ?

## ವಾರ್ಡನ್ ಮತ್ತು ಪ್ರೌಢ ಶಾಲಾ ಶಿಕ್ಷಕರ ವೇತನದಲ್ಲಿ ತಾರತಮ್ಯ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೪೨ (೧೬೮೦) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಾರ್ಡನ್‌ಗಳಿಗೆ ನಿಗದಿಪಡಿಸಿದ ವೇತನವೆಷ್ಟು ;

(ಆ) ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರೌಢ ಶಾಲಾ ಶಿಕ್ಷಕರಿಗೆ ಮತ್ತು ಸಮಾಜ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಾರ್ಡನ್‌ಗಳಿಗೆ ನೀಡುವ ವೇತನ ಸಮನಾಗಿದೆಯೇ ;

(ಇ) ಇಲ್ಲದಿದ್ದಲ್ಲಿ, ಈ ರೀತಿ ವೇತನ ತಾರತಮ್ಯ ಮಾಡಲು ಕಾರಣವೇನು ;

(ಈ) ವೇತನ ತಾರತಮ್ಯ ನಿವಾರಿಸಲು ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣ ವಿವರ ನೀಡುವುದು) ?

## ಸಮಾಜ ಕಲ್ಯಾಣ ಖಾತೆಯ ಅನುದಾನದಿಂದ ವಿದ್ಯಾರ್ಥಿಗಳ ಉತ್ತೀರ್ಣತೆ

**ಶ್ರೀ ವಿ. ಸೋಮಣ್ಣ. (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೪೩ (೧೬೮೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಇತರೆ ಹಿಂದುಳಿದ ಜಾತಿಗಳ ವಿದ್ಯಾರ್ಥಿಗಳಿಗೆ ಐ.ಎ.ಎಸ್., ಕೆ.ಎ.ಎಸ್., ಬ್ಯಾಂಕಿಂಗ್ ಸೇರಿದಂತೆ ಇನ್ನಿತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ನೀಡುವ ತರಬೇತಿಗಳಿಗೆ ಹಣವನ್ನು ಖರ್ಚು ಮಾಡಲಾಗಿದೆಯೇ ; ಖರ್ಚು ಮಾಡಿದ್ದಲ್ಲಿ, ೨೦೧೨-೧೩ನೇ ಸಾಲಿನಿಂದ ಇಲ್ಲಿಯವರೆಗೆ ಒಟ್ಟು ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ (ಜಿಲ್ಲಾವಾರು ವಿವರ ನೀಡುವುದು) ;

(ಆ) ಇದರಲ್ಲಿ ಖಾಸಗಿ ತರಬೇತಿ ಕೇಂದ್ರಗಳಿಗೆ ಹಣ ನೀಡಲಾಗಿದೆಯೇ; ನೀಡಿದ್ದಲ್ಲಿ ಎಷ್ಟು ಹಣ ನೀಡಲಾಗಿದೆ (ವಿವರ ನೀಡುವುದು) ;

(ಇ) ಖಾಸಗಿ ತರಬೇತಿ ಕೇಂದ್ರಗಳು ತರಬೇತಿ ನೀಡಲು ಆಯ್ಕೆ ಮಾಡುವಾಗ ಬಳಸುವ ಮಾನದಂಡಗಳೇನು; ಇದುವರೆಗೂ ಖಾಸಗಿ ತರಬೇತಿ ಕೇಂದ್ರಗಳಿಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ; ಇದುವರೆಗೂ ಸರ್ಕಾರ ಮತ್ತು ಖಾಸಗಿ ತರಬೇತಿ ಕೇಂದ್ರಗಳು ನೀಡಿದ ತರಬೇತಿಯಿಂದ ಒಟ್ಟು ಎಷ್ಟು ಅಭ್ಯರ್ಥಿಗಳು ತೇರ್ಗಡೆಯಾಗಿ ಸರ್ಕಾರಿ ಹುದ್ದೆಗಳಿಗೆ ಆಯ್ಕೆಯಾಗಿದ್ದಾರೆ (ಅವರುಗಳ ವಿವರ ಹಾಗೂ ತರಬೇತಿಗೆ ಆಯ್ಕೆಯಾಗಿದ್ದ ಒಟ್ಟು ವಿದ್ಯಾರ್ಥಿಗಳ ವಿಳಾಸದೊಂದಿಗೆ ವಿವರ ನೀಡುವುದು ?

## ಪಡಿತರ ಖಾತರಿ ಘೋಷಣೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೩೪೪ (೧೬೭೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಡಿತರ ಖಾತರಿ ಘೋಷಣೆ ಯಾವಾಗಿನಿಂದ ಜಾರಿಯಲ್ಲಿದೆ (ವಿವರ ನೀಡುವುದು) ;

(ಆ) ಪ್ರತಿ ಬಿಪಿಎಲ್ ಕಾರ್ಡುದಾರರಿಗೆ ನೀಡುತ್ತಿರುವ ಪಡಿತರ ಎಷ್ಟು; ಇದರಲ್ಲಿ ಗೋಧಿಯೂ ಸೇರಿದೆಯೇ ;

(ಇ) ಪ್ರಸ್ತುತ ಗೋಧಿ ದಾಸ್ತಾನು ಎಷ್ಟಿದೆ ; ತಿಂಗಳಿಗೆ ಎಷ್ಟು ಪ್ರಮಾಣದ ಗೋಧಿಯ ಅವಶ್ಯಕತೆ ಇದೆ ?

## ಸೊಳ್ಳೆಗಳಿಂದ ಹರಡುವ ಕಾಯಿಲೆಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೩೪೫ (೧೬೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸೊಳ್ಳೆಗಳಿಂದ ಹರಡುವ ಕಾಯಿಲೆಗಳು ಯಾವುವು; ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಶೇಕಡಾ ಎಷ್ಟರ ಪ್ರಮಾಣದಲ್ಲಿ ರೋಗಿಗಳ ದಾಖಲಾತಿ ಮತ್ತು ಸಾವುಗಳು ಹೆಚ್ಚಿರುವ ಅಥವಾ ಕಡಿಮೆಯಾಗಿರುವ ಬಗ್ಗೆ ಖಾಯಿಲೆಗಳ ಪ್ರತ್ಯೇಕ ವಿವರ ನೀಡುವುದು;

(ಆ) ಪ್ರಮುಖವಾಗಿ ಬೆಂಗಳೂರು ನಗರದ ಹಲವು ಖಾಸಗಿ ಆಸ್ಪತ್ರೆಗಳಿಂದ ಸದರಿ ರೋಗಿಗಳ ದಾಖಲಾತಿ ಕುರಿತು ಮಾಹಿತಿ ಸಮರ್ಪಕವಾಗಿ ಸಿಗುತ್ತಿಲ್ಲ ಎನ್ನುವ ವಿಚಾರ ಸರ್ಕಾರಕ್ಕೆ ತಿಳಿದಿದೆಯೇ; ಸಮರ್ಪಕವಾಗಿ ಅಂಕಿ–ಅಂಶಗಳನ್ನು ಪಡೆಯಲು ಯಾವ ರೀತಿಯ ವಿಶೇಷ ಕ್ರಮ ಕೈಗೊಳ್ಳಲಾಗಿದೆ ?

## ಸೀಮೆ ಎಣ್ಣೆ ಅಕ್ರಮ ಮಾರಾಟ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು):–**

೧೩೪೬ (೧೬೯೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜನವರಿ ತಿಂಗಳಿಂದ ಇತ್ತೀಚಿನವರೆಗೆ ಎಷ್ಟು ಬಿ.ಪಿ.ಎಲ್. ಪಡಿತರ ಸೀಮೆ ಎಣ್ಣೆ ಅಕ್ರಮ ಮಾರಾಟ ಪ್ರಕರಣಗಳು ಬೆಳಕಿಗೆ ಬಂದಿವೆ ;

(ಆ) ತಿಂಗಳಿನಿಂದ ಎಷ್ಟು ಪ್ರಮಾಣದ ಬಿ.ಪಿ.ಎಲ್. ಸೀಮೆ ಎಣ್ಣೆ ವಿತರಣೆಗೆ ಅಗತ್ಯವಿರುತ್ತದೆ ;

(ಇ) ಸೀಮೆ ಎಣ್ಣೆ ಅಕ್ರಮ ಮಾರಾಟ ತಡೆಗಟ್ಟಲು ಯಾವ ರೀತಿಯ ವಿಶೇಷ ಕ್ರಮ ತೆಗೆದುಕೊಳ್ಳಲಾಗಿದೆ ?

## ಬಳ್ಳಾರಿ ಜಿಲ್ಲೆಯಲ್ಲಿ ರಾಷ್ಟ್ರೀಯ ಆರೋಗ್ಯ ಮಿಷನ್ ಯೋಜನೆ ಕಾರ್ಯ ಚಟುವಟಿಕೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೪೭ (೧೬೯೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಳ್ಳಾರಿ ಜಿಲ್ಲೆಯಲ್ಲಿ ರಾಷ್ಟ್ರೀಯ ಆರೋಗ್ಯ ಮಿಷನ್ ಯೋಜನೆ ಜಾರಿಯಲ್ಲಿದೆಯೇ ;

(ಆ) ಜಾರಿಯಲ್ಲಿದ್ದರೆ, ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಈ ಯೋಜನೆ ಜಾರಿಯಲ್ಲಿದೆ (ತಾಲ್ಲೂಕುಗಳ ವಿವರ ನೀಡುವುದು) ;

(ಇ) ಈ ಯೋಜನೆಯಡಿಯಲ್ಲಿ ಯಾವ ಯಾವ ತರಹದ ಚಿಕಿತ್ಸೆ/ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಈ ಯೋಜನೆಯ ಕಾರ್ಯರೂಪ ಏನು ;

(ಈ) ಕಳೆದ ೩ ವರ್ಷಗಳಲ್ಲಿ ಈ ಯೋಜನೆಯಲ್ಲಿ ಎಷ್ಟು ಹಣ ಬಿಡುಗಡೆ ಗೊಳಿಸಲಾಗಿದೆ ; ಯಾವ ಯಾವ ತರಹದ ಕಾರ್ಯಗಳಿಗೆ ವೆಚ್ಚಮಾಡಲಾಗಿದೆ ( ವರ್ಷವಾರು ಪ್ರತ್ಯೇಕ ವಿವರ ನೀಡುವುದು) ?

## ಮೊರಾರ್ಜಿ ವಸತಿ ಶಾಲೆ ಕಟ್ಟಡಗಳ ಕಳಪೆ ಕಾಮಗಾರಿ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೪೮ (೧೬೯೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಮೊರಾರ್ಜಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ;

(ಆ) ಆ ಪೈಕಿ ಎಷ್ಟು ವಸತಿ ಶಾಲೆಗಳು ಸ್ವಂತ ಕಟ್ಟಡ ಮತ್ತು ಎಷ್ಟು ವಸತಿ ಶಾಲೆಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ (ವಿವರ ನೀಡುವುದು) ;

(ಇ) ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಾಲೆಗಳ ಕಟ್ಟಡಗಳು ಸುರಕ್ಷಿತ ಮತ್ತು ಸುಸಜ್ಜಿತವಾಗಿವೆಯೇ ;

(ಈ) ಹೊಸದಾಗಿ ನಿರ್ಮಿಸಿದ ಮೊರಾರ್ಜಿ ವಸತಿ ಶಾಲೆಗಳ ಕಟ್ಟಡಗಳು ಕಳಪೆ ಕಾಮಗಾರಿಯಿಂದಾಗಿ ಸುರಕ್ಷಿತ ಮತ್ತು ಸುಸಜ್ಜಿತವಾಗಿಲ್ಲದಿರುವುದು ಸರ್ಕಾರ ಗಮನಿಸಿ, ಏನು ಕ್ರಮಕೈಗೊಂಡಿದೆ ?

## ಸಂಚಾರಿ ಆಸ್ಪತ್ರೆ ರದ್ದುಪಡಿಸಿರುವುದು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) –**

೧೩೪೯ (೧೬೯೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಂಚಾರಿ ಆಸ್ಪತ್ರೆಗಳನ್ನು ರದ್ದುಪಡಿಸಿ ಆದೇಶ ಹೊರಡಿಸಲಾಗಿದೆಯೇ ;

(ಆ) ಹೊರಡಿಸಿದ್ದಲ್ಲಿ, ಸಂಚಾರಿ ಆಸ್ಪತ್ರೆಗಳನ್ನು ರದ್ದುಪಡಿಸಲು ಕಾರಣಗಳೇನು ;

(ಇ) ಈಗಾಗಲೇ ಖಾಯಂ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆಯಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದು ಸಂಚಾರಿ ಆಸ್ಪತ್ರೆಗಳನ್ನು ರದ್ದುಪಡಿಸುವುದರಿಂದ ಪರ್ಯಾಯ ಏನು ವ್ಯವಸ್ಥೆ ಮಾಡಲಾಗಿದೆ ?

## ಕೆಂಪೇಗೌಡ ಬಸ್ ನಿಲ್ದಾಣದ ನವೀಕರಣ ಮತ್ತು ಆಧುನಿಕತೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೩೫೦ (೧೬೯೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಮಹಾನಗರದಲ್ಲಿ ಕೆಂಪೇಗೌಡ ಬಸ್ ನಿಲ್ದಾಣವನ್ನು ನವೀಕರಣ ಹಾಗೂ ಆಧುನಿಕ ಬಸ್ ನಿಲ್ದಾಣ ಮಾಡಲು ಯಾವಾಗ ನಿರ್ಧರಿಸಲಾಯಿತು ;

(ಆ) ಹಾಗಿದ್ದಲ್ಲಿ, ಯಾವ ಮಾದರಿಯಲ್ಲಿ ಅಥವಾ ಯಾವ ಸ್ವರೂಪದಲ್ಲಿ ನೂತನ, ಆಧುನಿಕ ಬಸ್ ನಿಲ್ದಾಣ ಮಾಡಲಾಗವುದು ;

(ಇ) ಎಷ್ಟು ವೆಚ್ಚದಲ್ಲಿ ಈ ಕಾಮಗಾರಿ ನಿರ್ವಹಿಸಲು ತೀರ್ಮಾನಿಸಲಾಗಿದೆ;

(ಈ) ಇದನ್ನು ನಿರ್ವಹಿಸುವ ಕಂಪನಿ ಯಾವುದು ;

(ಉ) ಸಾರ್ವಜನಿಕ ಪ್ರಯಾಣಿಕರಿಗೆ ಯಾವ-ಯಾವ ಸೌಲಭ್ಯಗಳನ್ನು ಈ ಬಸ್ ಸ್ಟ್ಯಾಂಡ್‌ನಲ್ಲಿ ಅಳವಡಿಸಿ ಕಾಮಗಾರಿ ಮಾಡಲಾಗುತ್ತದೆ (ವಿವರ ಕೊಡುವುದು) ;

(ಊ) ಎಷ್ಟು ದಿನಗಳಲ್ಲಿ ಪ್ರಯಾಣಿಕರಿಗೆ ನೂತನ ಬಸ್‌ಸ್ಟ್ಯಾಂಡ್ ಸೌಲಭ್ಯ ದೊರೆಯುವುದು ?

## ಜನಸಂಖ್ಯೆಗನುಗುಣವಾಗಿ ಆಸ್ಪತ್ರೆಗಳು ಮತ್ತು ವೈದ್ಯ/ಸಿಬ್ಬಂದಿ ಹುದ್ದೆಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೩೫೧ (೧೬೯೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ತಾಲ್ಲೂಕಿನಲ್ಲಿ ಇರುವ ಒಟ್ಟು ಆಸ್ಪತ್ರೆಗಳೆಷ್ಟು; ಎಲ್ಲೆಲ್ಲಿದೆ ;

(ಆ) ತಾಲ್ಲೂಕಿನ ಜನಸಂಖ್ಯೆಗೆ ಅನುಗುಣವಾಗಿ ಹಾಲಿ ಇರುವ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದೆಯೇ ;

(ಇ) ತಾಲ್ಲೂಕಿನ ಹಾಲಿ ಆಸ್ಪತ್ರೆಗಳಲ್ಲಿ ಇರುವ ವೈದ್ಯರೆಷ್ಟು; ಖಾಲಿ ಇರುವ ವೈದ್ಯರ ಹುದ್ದೆಗಳೆಷ್ಟು ;

(ಈ) ವೈದ್ಯರು ಹಾಗೂ ಸಿಬ್ಬಂದಿ ಕೊರತೆ ಬಗ್ಗೆ ಪೂರ್ಣ ವಿವರ ನೀಡುವುದು ;

(ಉ) ರೋಗಿಗಳಿಗೆ ತೃಪ್ತಿಕರವಾಗಿ ಸೌಲಭ್ಯ ಹಾಗೂ ಸೌಕರ್ಯಗಳನ್ನು ಒದಗಿಸಲಾಗಿದೆಯೇ (ಮಾಹಿತಿ ನೀಡುವುದು) ?

## ಶ್ರೀ ಗವೀರಂಗನಾಥಸ್ವಾಮಿ ದೇವಸ್ಥಾನದ ರಾಜಗೋಪುರ ನಿರ್ಮಾಣ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೩೫೨ (೧೬೯೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆ, ಹೊಸದುರ್ಗ ತಾಲ್ಲೂಕು ಗವೀರಂಗಾಪುರದಲ್ಲಿರುವ ಶ್ರೀ ಗವೀರಂಗನಾಥಸ್ವಾಮಿ ದೇವಸ್ಥಾನಕ್ಕೆ

ರಾಜಗೋಪುರ ನಿರ್ಮಿಸಲು ಅನುದಾನ ಬಿಡುಗಡೆಗೆ ಬೇಡಿಕೆ ಬಂದಿದೆಯೇ; ಬಂದಿದ್ದಲ್ಲಿ ಎಷ್ಟು ಮೊತ್ತದ ಅನುದಾನಕ್ಕಾಗಿ ಕೋರಿಕೆ ಸಲ್ಲಿಸಿದೆ ;

(ಆ) ಲೆಕ್ಕಶೀರ್ಷಿಕೆ BCW155, BMS2011, ದಿನಾಂಕ ೧೫-೦೯-೨೦೧೨ "ನೇಕಾರರ ಅಭಿವೃದ್ಧಿ ಯೋಜನೆ"ಯಲ್ಲಿ ಈ ಕಾಮಗಾರಿಗೆ ಆಡಳಿತಾತ್ಮಕ ಮಂಜುರಾತಿ ಸಿಕ್ಕಿದೆಯೆ (ವಿವರ ಕೊಡುವುದು) ;

(ಇ) ಹಾಗಿದ್ದಲ್ಲಿ, ಇದುವರೆವಿಗೂ ಕಾಮಗಾರಿ ಆರಂಭಿಸದಿರಲು ಕಾರಣವೇನು ;

(ಈ) ಈ ಅನುದಾನ ಪಡೆಯಲು ಹಾಕಿರುವ ಷರುತ್ತುಗಳೇನು; ಇಲಾಖಾ ಮಾನದಂಡವೇನು ;

(ಉ) ಸದರಿ ದೇವಸ್ಥಾನದ ರಾಜಗೋಪುರ ನಿರ್ಮಾಣ ಕಾರ್ಯ ಕೈಗೊಳ್ಳಲು ಸರ್ಕಾರ ತ್ವರಿತಗತಿಯಲ್ಲಿ ಕ್ರಮ ತೆಗೆದುಕೊಳ್ಳುವುದೇ ?

## ಶ್ರೀ ಕಾಡಸಿದ್ದೇಶ್ವರ ಮಠದ ಸಸ್ಯವನ ಹಾಗೂ ಆಯುಷ್ ಆಸ್ಪತ್ರೆಗೆ ಅನುದಾನ ಬಿಡುಗಡೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೩೫೩ (೧೭೦೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ನೊಣವಿನಕೆರೆ ಶ್ರೀ ಕಾಡಸಿದ್ದೇಶ್ವರ ಮಠದ ಆವರಣದಲ್ಲಿ ಸಸ್ಯವನ ಹಾಗೂ ಆಯುಷ್ ಆಸ್ಪತ್ರೆ ಎಂದಿನಿಂದ ಕಾರ್ಯ ನಿರ್ವಹಿಸುತ್ತಿದೆ ;

(ಆ) ಪ್ರತಿ ದಿವಸ ಸಹಸ್ರಾರು ಯಾತ್ರಾರ್ಥಿಗಳು ಇಲ್ಲಿಗೆ ಆಗಮಿಸಿ ಇದರ ಉಪಯೋಗ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಇನ್ನೂ ಹೆಚ್ಚಿನ ಸೌಲಭ್ಯ ಒದಗಿಸುವಂತೆ ಕೋರಿ ಮಠದ ವತಿಯಿಂದ ಬೇಡಿಕೆ ಬಂದಿರುವುದೇ; ಎಷ್ಟು ಅನುದಾನ ನೀಡುವಂತೆ ಕೋರಲಾಗಿದೆ ;

(ಈ) ಈಗಾಗಲೇ ಸರ್ಕಾರ ಮಂಜೂರು ಮಾಡಿರುವ ಅನುದಾನವೆಷ್ಟು ;

(ಉ) ಸಾರ್ವಜನಿಕರಿಗೆ ಉಚಿತವಾಗಿ ಆಯುಷ್ ವೈದ್ಯ ಚಿಕಿತ್ಸೆ ನೀಡುತ್ತಿರುವ ಈ ಮಠದ ಆಸ್ಪತ್ರೆಗೆ ಕೋರಿರುವ ಪೂರ್ಣ ಅನುದಾನವನ್ನು ಶೀಘ್ರ ಬಿಡುಗಡೆ ಮಾಡದಿರಲು ಕಾರಣವೇನು ;

(ಊ) ತಕ್ಷಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದೆ ?

## ಬೆಂಗಳೂರು ನಗರದಿಂದ ಹೊರಡುವ ಬಸ್ಸುಗಳು ಮತ್ತು ನಿಲ್ದಾಣಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೩೫೪ (೧೭೦೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನಿಂದ ಇತರೆ ಜಿಲ್ಲಾ ಪ್ರದೇಶಗಳಿಗೆ ಹಾಗೂ ಹೊರರಾಜ್ಯಗಳಿಗೆ ಹೋಗುವ ಬಸ್‌ಗಳ ನಿಲ್ದಾಣವನ್ನು ನಗರದ ಹೊರವಲಯದಲ್ಲಿ ಮಾಡಲಾಗಿದೆಯೇ ;

(ಆ) ಹಿಂದಿನ ದಿನಗಳಲ್ಲಿ ಕೆಂಪೇಗೌಡ ಬಸ್ ನಿಲ್ದಾಣದಿಂದ ಹೊರಡುತ್ತಿದ್ದ ಈ ಬಸ್‌ಗಳು ಈಗ ಮಾರ್ಗ ಬದಲಾವಣೆ ಅಥವಾ ಬಸ್ ನಿಲ್ದಾಣದ ಮಾರ್ಪಾಟಿನ ಬಗ್ಗೆ ಮಾಹಿತಿ ನೀಡುವುದು ;

(ಇ) ಕೆಂಪೇಗೌಡ ಬಸ್ ನಿಲ್ದಾಣದ ಕಾಮಗಾರಿ ಪೂರ್ಣಗೊಂಡ ನಂತರ ಮತ್ತೆ ಕೇಂದ್ರೀಯ ಬಸ್ ನಿಲ್ದಾಣದಿಂದ ಸದರಿ ಬಸ್ಸುಗಳನ್ನು ಹೊರಡಿಸಲಾಗುವುದೇ ;

(ಈ) ಎಂದಿನಿಂದ ಈ ವ್ಯವಸ್ಥೆ ಪುನರ್ ಜಾರಿಗೆ ಬರಲಿದೆ ?

## ಬಯಲು ಸೀಮೆ ಪ್ರಾಧಿಕಾರ ಮತ್ತು ಮಾಹಿತಿ ತಂತ್ರಜ್ಞಾನ ಪಾರ್ಕ್ ನಿರ್ಮಾಣ

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೧೩೫೫ (೧೭೦೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರದಿಂದ ಬಿಜಾಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಯಾವ ಯಾವ ಕಾರ್ಯಕ್ಕಾಗಿ ಅನುದಾನ ಬಿಡುಗಡೆ ಮಾಡಲಾಗಿದೆ ;

(ಆ) ಯಾವ ಯಾವ ಶಾಸಕರ ಶಿಫಾರಸ್ಸಿನ ಮೇರೆಗೆ ಬಿಡುಗಡೆ ಮಾಡಲಾಗಿದೆ ?

## ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಗಳು

ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–

೧೩೫೬ (೧೭೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಜಾಪುರದ ಜಿಲ್ಲಾ ಆಸ್ಪತ್ರೆಯು ಎಷ್ಟು ಹಾಸಿಗೆಗಳ ಚಿಕಿತ್ಸಾ ವ್ಯವಸ್ಥೆಯನ್ನು ಹೊಂದಿದೆ; ಅವು ಯಾವುವು ;

(ಆ) ಆಸ್ಪತ್ರೆಯ ಜಮೀನಿನ ಒಟ್ಟು ವಿಸ್ತೀರ್ಣ ಎಷ್ಟು ;

(ಇ) ಅದರಲ್ಲಿರುವ ಕಟ್ಟಡಗಳು ಯಾವುವು; ಒದಗಿಸಿದ ಮೂಲಭೂತ ಸೌಕರ್ಯಗಳು ಯಾವುವು ?

## ಮಾಹಿತಿ ತಂತ್ರಜ್ಞಾನ ಪಾರ್ಕ್

ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–

೧೩೫೭ (೧೭೦೫೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಉಪ ಪ್ರಾದೇಶಿಕ ಕೇಂದ್ರ ಸ್ಥಾಪನೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಬೆಳಗಾಂ, ಬಿಜಾಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಮಾಹಿತಿ ತಂತ್ರಜ್ಞಾನ ಪಾರ್ಕ್ ಮಾಡುವ ಚಿಂತನೆಯನ್ನು ಸರ್ಕಾರ ಮಾಡಿದೆಯೇ ;

(ಇ) ಈ ನಿಟ್ಟಿನಲ್ಲಿ ನಡೆಸಿರುವ ಕ್ರಮವೇನು ?

## ವೈದ್ಯಕೀಯ ಕಾಲೇಜು ಸ್ಥಾಪನೆ

ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :-

೧೩೫೮ (೧೭೧೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ವೈದ್ಯಕೀಯ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಸ್ಸುಗಳಲ್ಲಿ ತುರ್ತು ನಿರ್ಗಮನದ ದ್ವಾರ ಅಳವಡಿಕೆ

ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ ) :-

೧೩೫೯ (೧೭೧೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಂಚರಿಸುವ ಎಲ್ಲಾ ಬಸ್‌ಗಳಿಗೆ ತುರ್ತು ನಿರ್ಗಮನದ ದ್ವಾರ ಅಳವಡಿಕೆ ಕಡ್ಡಾಯ ಮಾಡಲಾಗಿದೆಯೇ ;

(ಆ) ಯಾವ-ಯಾವ ಬಸ್ಸುಗಳಿಗೆ ತುರ್ತು ನಿರ್ಗಮನದ ದ್ವಾರ ಅಳವಡಿಕೆ ಕಡ್ಡಾಯ ಮಾಡಲಾಗಿದೆ ;

(ಇ) ಖಾಸಗಿ ಬಸ್ಸುಗಳಲ್ಲಿ ಇಲ್ಲಿಯವರೆಗೂ ತುರ್ತು ನಿರ್ಗಮನದ ದ್ವಾರ ಅಳವಡಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿಯವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ರಾಜ್ಯದಲ್ಲಿ ಸಂಚರಿಸುವ ಎಲ್ಲಾ ಬಸ್‌ಗಳಿಗೆ ತುರ್ತು ನಿರ್ಗಮನದ ದ್ವಾರ ಅಳವಡಿಸಲು ಸಮಯವನ್ನು ನಿಗದಿಪಡಿಸಲಾಗಿದೆಯೇ (ಹಾಗಿದ್ದಲ್ಲಿ ಮಾಹಿತಿ ನೀಡುವುದು) ?

**ಖಾಸಗಿ ವಿದ್ಯಾರ್ಥಿ ನಿಲಯಗಳಿಗೆ ಅನುದಾನ ನೀಡಿಕೆ**

ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):-

೧೩೬೦ (೧೭೧೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ಖಾಸಗಿ ಸಂಸ್ಥೆಗಳು ನಡೆಸುವ ವಿದ್ಯಾರ್ಥಿ ನಿಲಯಗಳಿಗೆ ಅನುದಾನ ನೀಡುತ್ತಿರುವುದು ನಿಜವಲ್ಲವೇ ;

(ಆ) ನಿಜವಾಗಿದ್ದರೆ, ಅನುದಾನ ಪಡೆಯಲು ಇರುವ ಮಾನ ದಂಡಗಳೇನು (ಪೂರ್ಣ ವಿವರ ನೀಡುವುದು) ?

**ಹಿಂದುಳಿದ ವರ್ಗಗಳಿಗೆ ಗಂಗಾ ಕಲ್ಯಾಣ ಯೋಜನೆ**

ಶ್ರೀ **ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):-**

೧೩೬೧ (೧೭೧೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗಗಳಿಗೆ ಗಂಗಾ ಕಲ್ಯಾಣ ಯೋಜನೆ ಜಾರಿಯಲ್ಲಿದೆಯೇ ;

(ಆ) ಜಾರಿಯಲ್ಲಿದ್ದರೆ, ಹಿಂದುಳಿದ ವರ್ಗಗಳು ಆ ಯೋಜನೆಯನ್ನು ಪಡೆಯಲು ವಿಧಿಸುವ ಮಾನದಂಡಗಳೇನು; ೨೦೧೪-೧೫ರ ಆಯವ್ಯಯದಲ್ಲಿ ಈ ಉದ್ದೇಶಕ್ಕೆ ಮೀಸಲಿಟ್ಟ ಮೊತ್ತ ಎಷ್ಟು ?

## ಹಿಂದುಳಿದ ವರ್ಗಗಳಿಗೆ ಜಾರಿಯಲ್ಲಿರುವ ಯೋಜನೆಗಳು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):-**

೧೩೬೨ (೧೭೧೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಜಾರಿಯಲ್ಲಿರುವ ಯೋಜನೆಗಳು ಯಾವುವು ; (ಪೂರ್ಣ ವಿವರ ಒದಗಿಸುವುದು)

(ಆ) ಆ ಯೋಜನೆಗಳನ್ನು ಪಡೆಯಲು ಇರುವ ಮಾನದಂಡಗಳೇನು; ೨೦೧೪-೧೫ರ ಆಯವ್ಯಯದಲ್ಲಿ ಆ ಉದ್ದೇಶಕ್ಕಾಗಿ ಮೀಸಲಿಟ್ಟ ಹಣದ ಮೊತ್ತವೆಷ್ಟು ?

## ಹೈಟೆಕ್ ಬಸ್ ನಿಲ್ದಾಣ ಲೋಕಾರ್ಪಣೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೬೩ (೧೭೦೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆ, ಸಿಂಧನೂರು ಪಟ್ಟಣದ ಹೈಟೆಕ್ ಬಸ್ ನಿಲ್ದಾಣ ಕಾಮಗಾರಿ ಸದ್ಯ ಯಾವ ಹಂತದಲ್ಲಿದೆ ;

(ಆ) ಸದರಿ ಕಾಮಗಾರಿಗಾಗಿ ಚಾಲನೆ ನೀಡಿದ್ದು ಯಾವಾಗ; ಗುತ್ತಿಗೆ ಕರಾರಿನನ್ವಯ ಕಾಮಗಾರಿಯನ್ನು ಮುಕ್ತಾಯಗೊಳಿಸಬೇಕಾಗಿದ್ದ ದಿನಾಂಕ ಯಾವುದು ;

(ಇ) ಸದರಿ ಕಾಮಗಾರಿಯ ವಿಳಂಬಕ್ಕೆ ಕಾರಣಗಳೇನು ;

(ಈ) ಸದ್ಯದ ಕಾಮಗಾರಿಯ ಪ್ರಗತಿಯನ್ನು ಅವಲೋಕಿಸಿ ಕಾಮಗಾರಿಯನ್ನು ಮುಕ್ತಾಯಗೊಳಿಸಿ ಬಸ್ ನಿಲ್ದಾಣವನ್ನು ಯಾವ ದಿನಾಂಕಕ್ಕೆ ಲೋಕಾರ್ಪಣೆ ಮಾಡಲಾಗುವುದು ?

## ಸಾರಿಗೆ ಸಂಸ್ಥೆಯ ಹವಾ ನಿಯಂತ್ರಿತ ಬಸ್ಸುಗಳ ಸೌಲಭ್ಯ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೩೬೪ (೧೭೦೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಿಂದ ಬೆಂಗಳೂರು ಮಾರ್ಗಕ್ಕೆ ಸಾರಿಗೆ ಸಂಸ್ಥೆಯ ಎಷ್ಟು ಹವಾ ನಿಯಂತ್ರಿತ, ಕರೋನಾ ಮತ್ತು ಸಾಧಾರಣ ಸ್ಲೀಪರ್ ಬಸ್ ವ್ಯವಸ್ಥೆ ಮಾಡಲಾಗಿದೆ ; ಇವುಗಳಲ್ಲಿ ನೂತನ ಬಸ್‌ಗಳ ಸಂಖ್ಯೆ ಎಷ್ಟು; ಹಳೆಯ ಬಸ್‌ಗಳ ಸಂಖ್ಯೆ ಎಷ್ಟು ;

(ಆ) ಸದರಿ ಮಾರ್ಗಗಳ ಪ್ರತಿ ದಿನದ ಗಳಿಕೆ ಎಷ್ಟು ; ಪ್ರತಿ ಮಾರ್ಗಗಳ ವಿವರಗಳನ್ನು ನೀಡುವುದು ;

(ಇ) ಸದರಿ ಬಸ್‌ಗಳನ್ನು ಆಗಾಗ್ಗೆ ರದ್ದುಗೊಳಿಸುತ್ತಿರುವುದು ಯಾವ ಕಾರಣಕ್ಕೆ ;

(ಈ) ಇದರಿಂದ ವಿಧಾನಮಂಡಲದ ಅಧಿವೇಶನಗಳಲ್ಲಿ ಭಾಗವಹಿಸಲು ಬರುವ ಶಾಸಕರಿಗೆ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರ ಯೋಚಿಸಿಲ್ಲವೇ;

(ಉ) ಈ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ಈ ಬಸ್‌ಗಳಲ್ಲಿ ಸ್ವಚ್ಛತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸ್ವಚ್ಛತೆಗಾಗಿ ಕೈಗೊಂಡ ಕ್ರಮಗಳೇನು ;

(ಋ) ಕೆಲವು ಬಸ್‌ಗಳಲ್ಲಿ ಮಾತ್ರ ಹೊದಿಕೆ ಮತ್ತು ಬೆಡ್‌ಶೀಟ್ ವಿತರಿಸಲಾಗುತ್ತಿದ್ದು, ಕೆಲವು ಬಸ್‌ಗಳಲ್ಲಿ ನೀಡದಿರಲು ಕಾರಣವೇನು?

## ಹೊಸ ಅಡುಗೆ ಅನಿಲ ಸಂಪರ್ಕ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೩೬೫ (೧೭೦೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಅಡುಗೆ ಅನಿಲ ಸಂಪರ್ಕವನ್ನು ಪಡೆಯಲು ಸಲ್ಲಿಸಿದ ಎಷ್ಟು ಅರ್ಜಿಗಳು ಬಾಕಿ ಇವೆ ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಸದರಿ ಅರ್ಜಿಗಳು ಬಾಕಿ ಉಳಿಯಲು ಕಾರಣಗಳೇನು; ಅರ್ಜಿಗಳು ಎಷ್ಟು ಅವಧಿಯಿಂದ ಬಾಕಿ ಇವೆ ;

(ಇ) ನೂತನ ಸಂಪರ್ಕ ಪಡೆಯಲು ಇರುವ ಮಾನದಂಡಗಳೇನು ; ಅದಕ್ಕೆ ತಗುಲುವ ವೆಚ್ಚ ಎಷ್ಟು ;

(ಈ) ಎಲ್ಲಾ ಜಿಲ್ಲೆಗಳಲ್ಲಿ ಅಕ್ರಮವಾಗಿ ಸಿಲಿಂಡರ್ ಪೂರೈಸುತ್ತಿರುವ ಬಗ್ಗೆ ಸರಕಾರಕ್ಕೆ ದೂರುಗಳೇನಾದರೂ ಸ್ವೀಕೃತವಾಗಿವೆಯೇ; ಸ್ವೀಕೃತವಾಗಿದ್ದಲ್ಲಿ ಕೈಗೊಂಡ ಕ್ರಮಗಳೇನು ;

(ಉ) ನೂತನ ಸಂಪರ್ಕ ಪಡೆಯುವಲ್ಲಿ ಏಜೆನ್ಸಿಯವರು ಸರಕಾರ ನಿಗದಿಪಡಿಸಿದ ಮೊತ್ತಕ್ಕಿಂತ ಹೆಚ್ಚಿನ ಹಣ ತೆಗೆದುಕೊಳ್ಳುತ್ತಿರುವ ವಿಷಯ ಸರಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರಕಾರ ಈ ಕುರಿತು ಕೈಗೊಂಡ ಕ್ರಮವೇನು ?

## ವಸತಿ ಶಾಲೆಗಳಲ್ಲಿನ ಚಿತ್ರಕಲಾ ಶಿಕ್ಷಕರುಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) :-**

೧೩೬೬ (೧೬೭೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಸಂಖ್ಯೆ ಎಷ್ಟು; ವಸತಿ ಶಾಲೆಗಳಲ್ಲಿ ಪ್ರವೇಶ ಪಡೆಯಲು ಇರುವ ಮನದಂಡಗಳೇನು ; ಮೀಸಲಾತಿಯ ಅನುಪಾತ ಪಾಲಿಸಲಾಗುತ್ತಿದೆಯೇ ; (ವಿವರಿಸುವುದು)

(ಆ) ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ಚೆನ್ನಮ್ಮ ವಸತಿ ಶಾಲೆಗಳಲ್ಲಿ ಮಂಜೂರಾದ ಹಾಗೂ ಸದ್ಯ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿಯಿರುವ ಸಿಬ್ಬಂದಿಗಳ (ಶಿಕ್ಷಕ ಮತ್ತು ಶಿಕ್ಷಕೇತರ) ಸಂಖ್ಯೆ ಎಷ್ಟು ; (ಹೈದ್ರಬಾದ್ ಕರ್ನಾಟಕ ಭಾಗದ ವಿವರ ಪ್ರತ್ಯೇಕವಾಗಿ ವಿವರಿಸುವುದು)

(ಇ) ಈ ವಸತಿ ಶಾಲೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಮತ್ತು ಶಿಕ್ಷಕರನ್ನು ನ್ಯಾಯಾಲಯದ ಆದೇಶದಂತೆ ಖಾಯಂಗೊಳಿಸಲು ಕೈಗೊಂಡ ಕ್ರಮವೇನು ;

(ಈ) ವಸತಿ ಶಾಲೆಗಳಲ್ಲಿ ಹೊಸ ನೇಮಕಾತಿ ಮಾಡಿಕೊಂಡಿರುವ ಚಿತ್ರಕಲಾ ಶಿಕ್ಷಕರ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಅವರಿಗೆ ನೇಮಕಾತಿ ಆದೇಶ ಹೊರಡಿಸಿ ಸೇವೆ ಸಲ್ಲಿಸಲು ಅನುಕೂಲತೆ ಮಾಡಿಕೊಡಲಾಗಿದೆಯೇ (ವಿವರಿಸುವುದು) ?

## ಭಾಷಾ ಅಲ್ಪಸಂಖ್ಯಾತ ಕಾಲೇಜುಗಳಲ್ಲಿ ಪ್ರವೇಶಾತಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) :–**

೧೩೬೭ (೧೬೬೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರಕಾರದಿಂದ ಮಾನ್ಯತೆ ಪಡೆದುಕೊಂಡು ಪ್ರಾರಂಭಿಸಲಾಗಿರುವ ಭಾಷಾ ಅಲ್ಪಸಂಖ್ಯಾತ ಕಾಲೇಜುಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ಮತ್ತು ಹೈದ್ರಾಬಾದ್ ಕರ್ನಾಟಕ ಭಾಗದ ವಿವರ ಪ್ರತ್ಯೇಕವಾಗಿ ನೀಡುವುದು)

(ಆ) ಭಾಷಾ ಅಲ್ಪಸಂಖ್ಯಾತ ಕಾಲೇಜುಗಳಲ್ಲಿ ಸರಕಾರವು ನಿಗದಿಪಡಿಸಿದ ಕೋಟಾದಂತೆ ಸೀಟು ಹಂಚಿಕೆ ನಡೆದಿದೆಯೇ ; ಸರಕಾರದ ಮಾರ್ಗಸೂಚಿಯಂತೆ ಪ್ರವೇಶ ಪ್ರಕ್ರಿಯೆ ನಡೆಸದೇ ಇರುವ ಕಾಲೇಜುಗಳ ವಿರುದ್ಧ ಸರಕಾರವು ಕೈಗೊಂಡಿರುವ ಕ್ರಮವೇನು ;

(ಇ) ಭಾಷಾ ಅಲ್ಪಸಂಖ್ಯಾತ ಕಾಲೇಜುಗಳನ್ನು ಪ್ರಾರಂಭಿಸಲು ಇರುವ ಮಾನದಂಡಗಳೇನು ;

(ಈ) ಈ ಕಾಲೇಜುಗಳು ಭಾರತೀಯ ವೈದ್ಯಕೀಯ ಪರಿಷತ್‌ನಿಂದ (ಎಂ.ಸಿ.ಐ) ಅನುಮೋದನೆ ಪಡೆದುಕೊಂಡಿವೆಯೇ ;

(ಉ) ಭಾಷಾ ಅಲ್ಪಸಂಖ್ಯಾತ ಕಾಲೇಜುಗಳಲ್ಲಿ ಮಂಜೂರಾದ ಹಾಗೂ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಂಖ್ಯೆ ಎಷ್ಟು (ಸಮಗ್ರ ವಿವರ ನೀಡುವುದು) ?

## ೫೦೦ ಹಾಸಿಗೆ ಆಸ್ಪತ್ರೆಯಲ್ಲಿ ದೊರಕುವ ಸೌಲಭ್ಯಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) :-**

೧೩೬೮ (೧೬೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲಬರ್ಗಾದಲ್ಲಿ ಹೊಸದಾಗಿ ೫೦೦ ಹಾಸಿಗೆ ಆಸ್ಪತ್ರೆ ಉದ್ಘಾಟನೆಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಆಸ್ಪತ್ರೆ ಮಂಜೂರಾಗಿರುವ ವರ್ಷ ಯಾವುದು; ಇದಕ್ಕೆ ಮಂಜೂರಾದ ಮೂಲ ಅನುದಾನ ಎಷ್ಟು ; ಇಲ್ಲಿಯವರೆಗೆ ಖರ್ಚಾದ ಹಣ ಎಷ್ಟು (ಸಂಪೂರ್ಣ ಮಾಹಿತಿ ನೀಡುವುದು) ;

(ಇ) ಈ ಆಸ್ಪತ್ರೆಯಲ್ಲಿ ದೊರೆಯುವ ಸೌಲಭ್ಯಗಳು ಯಾವುವು ; ಎಲ್ಲಾ ವಿಭಾಗಗಳು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿವೆಯೇ (ಸಮಗ್ರ ಮಾಹಿತಿ ನೀಡುವುದು) ;

(ಈ) ಈಗಾಗಲೇ ಉದ್ಘಾಟನೆಗೊಂಡಿರುವ ಈ ಆಸ್ಪತ್ರೆ ಕಾರ್ಯಾರಂಭ ಮಾಡದಿರುವುದಕ್ಕೆ ಕಾರಣಗಳೇನು (ವಿವರ ನೀಡುವುದು) ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ.03386/1000 ಪ್ರತಿಗಳು/17-07-2014